# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 Issue : 85 SUNDAY 07-06-2026 PRGI No : KNKAN/26/A0962 Pages:4 Rs.2.00 M: 9742418836


## ಕಾಂಗ್ರೆಸ್ ಸಚಿವ ಸಂಪುಟ ಭಿನ್ನಮತ ಶಮನ: ರಾಜೀನಾಮೆ ವಾಪಸ್ ಪಡೆದ ರಾಮಲಿಂಗಾ ರೆಡ್ಡಿ!



ಬೆಂಗಳೂರು: ಖಾತೆ ಹಂಚಿಕೆ ವಿಷಯವಾಗಿ ಡಿಕೆ ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರದಲ್ಲಿ ಉಂಟಾಗಿದ್ದ ಗೊಂದಲ, ಭಿನ್ನಮತ ಶಮನಗೊಂಡಂತಿದೆ.

ಜಲಸಂಪನ್ಮೂಲ ಖಾತೆ ನೀಡಿದ್ದಕ್ಕೆ ಅಸಮಾಧಾನ ವ್ಯಕ್ತಪಡಿಸಿ ರಾಜೀನಾಮೆ ನೀಡಿದ್ದ ಸಚಿವ ರಾಮಲಿಂಗಾ ರೆಡ್ಡಿ ಕಾಂಗ್ರೆಸ್ ಹೈಕಮಾಂಡ್ ನಾಯಕರ ಮನವೊಲಿಕೆ, ಸಂಧಾನದ ಬಳಿಕ ರಾಜಿನಾಮೆ ವಾಪಸ್ ಪಡೆದಿದ್ದಾರೆ.

ಹೈಕಮಾಂಡ್ ನಾಯಕ ರಣ್ದೀಪ್ ಸುರ್ಜೆವಾಲ ಅವರೊಂದಿಗೆ ಸಭೆ ಬಳಿಕ ಮಾಧ್ಯಮಗಳಿಗೆ ಪ್ರತಿಕ್ರಿಯೆ ನೀಡಿರುವ ರಾಮಲಿಂಗಾ ರೆಡ್ಡಿ, ನಾನು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದೆ, ಆದರೆ ಮುಖ್ಯಮಂತ್ರಿಗಳು ರಾಜೀನಾಮೆ ಸ್ವೀಕರಿಸುವುದಿಲ್ಲ ಎಂದು ಹೇಳಿದ್ದಾರೆ, ರಾಜೀನಾಮೆ ಅಂಗೀಕಾರ ಮಾಡುವುದಿಲ್ಲ ಎಂದರೆ ರಿಜೆಕ್ಟ್ ಎಂದು ಅರ್ಥ. ಸಿಎಂ ಜೊತೆ ಮಾತನಾಡಿದ್ದೇನೆ. ಖಾತೆ ವಿಷಯವನ್ನು ಮುಖ್ಯಮಂತ್ರಿಗಳು ಹಾಗೂ ಹೈಕಮಾಂಡ್ ನಾಯಕರು ನೋಡಿಕೊಳ್ಳುತ್ತಾರೆ ಎಂದು ಹೇಳಿದ್ದಾರೆ. ಎಲ್ಲಾ ಗೊಂದಲಗಳೂ ಬಗೆಹರಿದಿವೆ ಎಂದು ಸಚಿವರು ಇದೇ ವೇಳೆ ತಿಳಿಸಿದ್ದಾರೆ.

# ರೌಡಿ ನಿಗ್ರಹ ದಳ ಅಂತೆ.. ಜನ ನಗ್ತಾರೆ.. ಡಿಕೆಶಿ ಮಾತು ಬರಿ ಬೊಗಳೆ..!: ಆರ್ ಅಶೋಕ್ ವ್ಯಂಗ್ಯ



ಬೆಂಗಳೂರು: ಕರ್ನಾಟಕ ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ರಾಜ್ಯ ಸರ್ಕಾರದ ರೌಡಿ ನಿಗ್ರಹ ದಳ ರಚಿಸಲು ಕೈಗೊಂಡಿರುವ ನಿರ್ಧಾರವನ್ನು ತೀವ್ರವಾಗಿ ಟೀಕಿಸಿದ್ದು, ರಾಜ್ಯದಲ್ಲಿ ಹದಗೆಟ್ಟಿರುವ ಕಾನೂನು ಮತ್ತು ಸುವ್ಯವಸ್ಥೆಯ ಪರಿಸ್ಥಿತಿಯನ್ನು ಮರೆಮಾಚುವ ಪ್ರಯತ್ನವೇ ಈ ಕ್ರಮ ಎಂದು ಆರೋಪಿಸಿದ್ದಾರೆ.

ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಆರ್ ಅಶೋಕ್, 'ರಾಜ್ಯದಲ್ಲಿ ಈಗಾಗಲೇ ಸಮರ್ಥ ಪೊಲೀಸ್ ಇಲಾಖೆ ಹಾಗೂ ಗುಪ್ತಚರ ವ್ಯವಸ್ಥೆ ಕಾರ್ಯನಿರ್ವಹಿಸುತ್ತಿರುವಾಗ ಹೊಸದಾಗಿ ವಿಶೇಷ ದಳ ರಚಿಸುವ ಅಗತ್ಯವೇನು ಎಂದು ಅವರು ಪ್ರಶ್ನಿಸಿದ್ದಾರೆ.

ಹೊಸ ವ್ಯವಸ್ಥೆಗಳನ್ನು ರೂಪಿಸುವ ಬದಲು, ಈಗಿರುವ ಕಾನೂನು ಜಾರಿ ಸಂಸ್ಥೆಗಳನ್ನು ಇನ್ನಷ್ಟು ಬಲಪಡಿಸಿ, ಅಪರಾಧ ಚಟುವಟಿಕೆಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಅವರು ಅಭಿಪ್ರಾಯಪಟ್ಟರು

ಕಾಂಗ್ರೆಸ್ ಸರ್ಕಾರದ ಆಡಳಿತಾವಧಿಯಲ್ಲಿ ರಾಜ್ಯದಲ್ಲಿ ಅಪರಾಧ ಪ್ರಕರಣಗಳು ಮತ್ತು ರೌಡಿಶೀಟರ್‌ಗಳ ಪ್ರಭಾವ ಹೆಚ್ಚಾಗಿದೆ ಎಂದು ಅಶೋಕ್ ಆರೋಪಿಸಿದರು. ಸಾರ್ವಜನಿಕರಲ್ಲಿ ಪೊಲೀಸರ ಮೇಲಿನ ವಿಶ್ವಾಸ ಕುಗ್ಗಿದ್ದು, ಆ್ಯಂಟಿ ರೌಡಿ ಸ್ಕ್ವಾಡ್ ಘೋಷಣೆ ನಿಜವಾದ ಅಪರಾಧ ನಿಯಂತ್ರಣಕ್ಕಿಂತಲೂ ರಾಜಕೀಯ ಪ್ರೇರಿತ ಕ್ರಮವಾಗಿದೆ ಎಂದು ಅವರು ಟೀಕಿಸಿದರು.

### ಆರ್ ಅಶೋಕ್ ಹೇಳಿದ್ದೇನು?

ರೌಡಿ ನಿಗ್ರಹ ದಳ ಮಾಡ್ತಾರಂತೆ. ಇದನ್ನು ಕೇಳಿ ರಾಜ್ಯಾದ್ಯಂತ ಜನ ನಗ್ತಿದ್ದಾರೆ. ಅದೂ ಯಾರಿಂದ, ಡಿಕೆಶಿಕುಮಾರ್ ಮತ್ತು ಹರಿಪ್ರಸಾದ್ ಅವರಿಂದ ಅಂತೆ. ಇದೆಲ್ಲ ಸಾಕಾರ ಆಗಲ್ಲ. ರಾಹುಲ್ ಗಾಂಧಿ ವಸೂಲಿಗೆ ಬಂದಿದ್ದಾರೆ ಅಷ್ಟೇ. ಅವರು ವಸೂಲಿ ಮಾಡಿ ಹೋಗ್ತಾರೆ. ಇವರು ಹೇಳೋದೆಲ್ಲಾ ಬೊಗಳೆ. ಇದು ಸಾಕಾರವಾಗಲ್ಲ ಎಂದು ಆರ್ ಅಶೋಕ್ ದೂರಿದರು.

ಇದರ ನಡುವೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಸಂಘಟಿತ ಅಪರಾಧ, ದಬ್ಬಾಳಿಕೆ ಮತ್ತು ಸಮಾಜಘಾತುಕ ಚಟುವಟಿಕೆಗಳ ವಿರುದ್ಧ ಪರಿಣಾಮಕಾರಿ ಕ್ರಮ ಕೈಗೊಳ್ಳುವ ಉದ್ದೇಶದಿಂದ ವಿಶೇಷ ಆ್ಯಂಟಿ ರೌಡಿ ಸ್ಕ್ವಾಡ್ ರಚಿಸಲು ಅಧಿಕಾರಿಗಳಿಗೆ ಸೂಚನೆ ನೀಡಿರುವುದಾಗಿ ಸರ್ಕಾರ ತಿಳಿಸಿದೆ.

ರಾಜ್ಯದಲ್ಲಿ ಸಾರ್ವಜನಿಕ ಸುರಕ್ಷತೆಯನ್ನು ಹೆಚ್ಚಿಸುವುದು ಮತ್ತು ಚಿರಪರಿಚಿತ ಅಪರಾಧಿಗಳ ವಿರುದ್ಧ ಸಮನ್ವಯದೊಂದಿಗೆ ಕಾರ್ಯಾಚರಣೆ ನಡೆಸುವುದೇ ಈ ದಳದ ಮುಖ್ಯ ಉದ್ದೇಶ ಎಂದು ಸರ್ಕಾರ ಸ್ಪಷ್ಟಪಡಿಸಿದೆ.

ಈ ಬೆಳವಣಿಗೆ ಆಡಳಿತಾರೂಢ ಕಾಂಗ್ರೆಸ್ ಮತ್ತು ಪ್ರತಿಪಕ್ಷ ಬಿಜೆಪಿ ನಡುವಿನ ರಾಜಕೀಯ ವಾಕ್ಸಮರಕ್ಕೆ ಮತ್ತೊಂದು ಆಯಾಮವನ್ನು ನೀಡಿದ್ದು, ಕರ್ನಾಟಕ ರಾಜಕೀಯದಲ್ಲಿ ಕಾನೂನು ಮತ್ತು ಸುವ್ಯವಸ್ಥೆಯ ವಿಚಾರ ಪ್ರಮುಖ ಚರ್ಚೆಯ ವಿಷಯವಾಗಿ ಪರಿಣಮಿಸಿದೆ.



**ಬೆಳಗಾವಿ ವಾರ್ತೆ ಗೋಕಾಕ:** ವಿಶ್ವ ಪರಿಸರ ದಿನಾಚರಣೆ ನಿಮಿತ್ಯ ಬಿಜೆಪಿ ಪಕ್ಷದಿಂದ ನಗರದ ಸಸ್ಯೋಧ್ಯಾನ ವನದಲ್ಲಿ ಶುಕ್ರವಾರದಂದು ಯುವ ಧುರೀಣ ಅಮರನಾಥ ಜಾರಕಿಹೊಳಿ ನೇತ್ರತ್ವದಲ್ಲಿ ಸಸಿಗಳನ್ನು ನೆಡಲಾಯಿತು. ಈ ಸಂದರ್ಭದಲ್ಲಿ ಬಿಜೆಪಿ ನಗರ ಮಂಡಲ ಅಧ್ಯಕ್ಷ ಭೀಮಶಿ ಭರಮಣ್ಣವರ, ಪ್ರಕಾಶ ಮುರಾರಿ, ಡಾ.ಜಮಾದಾರ, ಸುರೇಶ ಸನದಿ, ಜಯಾನಂದ ಹುಣಚ್ಯಾಲ, ಅಡಿವೆಪ್ಪ ಕಿತ್ತೂರ, ಅಬ್ಬಾಸ ದೇಸಾಯಿ, ಸಿದ್ರಾಮ ಹುಚ್ಚರಾಮಗೋಳ, ಬಾಬು ಮುಳಗುಂದ, ಕೆಂಚಪ್ಪ ಗೌಡಪ್ಪಗೋಳ, ಮಂಜುನಾಥ ಮಾವರಕರ, ರವಿ ಮಡ್ಡೆಪ್ಪಗೋಳ, ಶ್ರೀರಂಗ ನಾಯಕ ಸೇರಿದಂತೆ ಅನೇಕರು ಇದ್ದರು.



**ಬೆಳಗಾವಿ ವಾರ್ತೆ ಗೋಕಾಕ:** ಲೋಕೋಪಯೋಗಿ ಇಲಾಖೆಯಿಂದ 2.50ಕೋಟಿ ರೂಗಳ ವೆಚ್ಚದಲ್ಲಿ ಗೋಕಾಕ, ಕಡಬಗಟ್ಟಿ ರಸ್ತೆ ನವಿಕರಣ ಕಾಮಗಾರಿಗೆ ಯುವ ಧುರೀಣ ಅಮರನಾಥ ಜಾರಕಿಹೊಳಿ ಶುಕ್ರವಾರದಂದು ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಲೋಕೋಪಯೋಗಿ ಇಲಾಖೆ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ರಾಮಚಂದ್ರ ಅವಕಾಡೆ, ಶಾಸರಕ ಆಪ್ತಸಹಾಯಕ ಸುರೇಶ ಸನದಿ, ಗುತ್ತಿಗೇದಾರ ಕಿರಣ ಗೋಣಿ, ಜನಪ್ರತಿನಿಧಿಗಳು, ಮುಖಂಡರು ಸೇರಿದಂತೆ ಅನೇಕರು ಇದ್ದರು.



**ಬೆಳಗಾವಿ ವಾರ್ತೆ ಗೋಕಾಕ:** ತಾಲೂಕಿನ ಬೆಟಗೇರಿ ಸರಕಾರಿ ಹಿರಿಯ ಪ್ರಾಥಮಿಕ ಹೆಣ್ಣು ಮಕ್ಕಳ ಶಾಲೆಯ 6ನೇ ತರಗತಿಯ ವಿದ್ಯಾರ್ಥಿನಿ ಕುಮಾರಿ ಭುವನಾ ಶಿವರುದ್ರಗೌಡ ದೇಯಣ್ಣವರ ಜೂ.5ರಂದು ವಿಶ್ವ ಪರಿಸರ ದಿನ ಪ್ರಯುಕ್ತ ಸಸಿ ನೆಟ್ಟು ನೀರು ಹಾಕಿ ಪರಿಸರ ಪ್ರೇಮ ಮೆರದು ಎಲ್ಲರ ಗಮನ ಸೆಳೆದಳು.

## ಸಸಿ ಹತ್ಯೆ- ಶಿಶು ಹತ್ಯೆಯಷ್ಟೇ ಮಹಾಪಾರ ಸಸಿಗಳನ್ನು ನೆಟ್ಟು ಪ್ರಕೃತಿ ಮಾತೆಯ ಋಣ ತೀರಿಸಿ; ಪರಪ್ಪಣ್ಣ ಸವದಿ

**ಬೆಳಗಾವಿ ವಾರ್ತೆ ಮೋಳೆ:** ಪ್ರತಿಯೊಬ್ಬರು ಮನೆ, ತೋಟ, ಶಾಲಾ ಆವರಣ ಹೀಗೆ ಅಗತ್ಯ ಸ್ಥಳಗಳಲ್ಲಿ ಸಸಿಗಳನ್ನು ನೆಟ್ಟು ಪೋಷಿಸುವ ಮೂಲಕ ಪ್ರಕೃತಿ ಮಾತೆಯ ಋಣ ತೀರಿ ಸಬೇಕಿದೆ ಎಂದು ಕೃಷ್ಣಾ ಸಹಕಾರಿ ಸಕ್ಕರೆ ಕಾರ್ಖಾನೆ ಪರಪ್ಪಣ್ಣ ಸವದಿ ಸಲಹೆ ನೀಡಿ ದರು. ಅವರು ಇಂದು ಕೃಷ್ಣಾ ಸಹಕಾರಿ ಸಕ್ಕರೆ ಕಾರ್ಖಾನೆ ಆವರಣದಲ್ಲಿ ಹಮ್ಮಿ ಕೊಂಡ ವನಮೋತ್ಸವ ಕಾರ್ಯಕ್ರಮದಲ್ಲಿ ಸಸಿಗಳನ್ನು ನೆಟ್ಟು ಮಾತನಾಡಿದ ಅವರು ಪ್ರಕೃತಿಯ ನೆಲೆ ಇಲ್ಲದೆ ಯಾವುದೇ ಜೀವರಾಶಿ ಬದುಕುಳಿಯಲು ಸಾಧ್ಯವಿಲ್ಲ. ನಗರೀಕರಣ ಸೇರಿದಂತೆ ಇನ್ನಿತರ ಚಟುವಟಿಕೆಗಳಿಂದಾಗಿ ಅರಣ್ಯ ಸಂಪತ್ತು ಕಣ್ಮರೆಗೆ ಸರಿದಿದ್ದು, ಪರಿಣಾಮ ವಾಡಿಕೆಯ ಮಳೆ ಕ್ಷೀಣಿಸುತ್ತಿದೆ, ಈಗ ಜೂನ ತಿಂಗಳು ಪ್ರಾರಂಭವಾಗಿ ಒಂದು ವಾರ ಗತಿಸಿದರು ಇನ್ನು ಮಳೆಯ ಲಕ್ಷ್ಣಗಳು ಕಾಣಿಸುತ್ತಿಲ್ಲ, ಎಂದು ತಿಳಿಸಿದ ಅವರು, ತಾಪಮಾನ ದಿನದಿಂದ ದಿನಕ್ಕೆ ಏರಿಕೆಯಾಗುತ್ತಿದ್ದು ಸದ್ಯ ದಲ್ಲಿಯೇ ಎಚ್ಚೆತ್ತು ಪರಿಸರದ ಅಭಿವೃದ್ಧಿಗೆ ಮುಂದಾಗದಿದ್ದರೆ ಬದುಕಿನ ನೆಲೆ ಕಳೆದುಕೊಳ್ಳಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದ ಅವರು ನಾವು ಕೃಷ್ಣಾ ಸಕ್ಕರೆ ಕಾರ್ಖಾನೆಯ ವತಿಯಿಂದ ಪ್ರತಿ ವರ್ಷ ಸಾವಿರ ಸಸಿಗಳನ್ನು ನೆಡುತ್ತಿದ್ದೇವೆ ಎಂದರು.

ಈ ವೇಳೆ ವ್ಯವಸ್ಥಾಪಕ ನಿರ್ದೇಶಕ ಜಿ.ಎಂ.ಪಾಟೀಲ ಮಾತನಾಡಿ ಮನೆಗೆರಡು ಮರ,ಅಥಣಿಗೆ ವರ ಎನ್ನುವ ಧ್ಯೇಯೋದ್ದೇಶದೊಂದಿಗೆ ಪ್ರತಿಯೊಬ್ಬರು ಮಕ್ಕಳಂತೆ ಸಸಿಗಳನ್ನು ನೆಟ್ಟು ಪ್ರೀತಿಯಿಂದ ಬೆಳೆಸಬೇಕು.ಮರ ಕಡಿಯುವುದನ್ನು ಖಂಡಿಸಬೇಕು. ಶಿಶು ಹತ್ಯೆ ಮಹಾಪಾಪ ಎಂಬುದು ಎಷ್ಟು ಸತ್ಯವೋ, ಸಸಿ ಹತ್ಯಯೂ ಅಷ್ಟೇ ಪಾಪ. ಶಿಶು ಹತ್ಯೆಯನ್ನು ಸರ್ವರೂ ಖಂಡಿಸುತ್ತಾರೆ. ಸಸಿ ಹತ್ಯೆಯನ್ನು ಅಷ್ಟೇ ಖಂಡಿಸಬೇಕು. ನಮ್ಮ ಮಕ್ಕಳು ಎಷ್ಟೇ ಕಷ್ಟ ಕೊಟ್ಟರು ಅದನ್ನು ಸಹಿಸಿಕೊಂಡು ಪ್ರೀತಿಂದ ಬೆಳೆಸುತ್ತೇವೆ. ಆದರೆ ನಮ್ಮಿಂದ ಯಾವುದೇ ಫಲಾಪೇಕ್ಷೆ ಪಡೆಯದೆ ಜೀವಾಮೃತವಾದ ಆಕ್ಸಿಜನ್ ಕೊಡುವ ಮರಗಳನ್ನು ಕಡಿಯಬಾರದೆಂದರು. ಈ ವೇಳೆ ಎಂಡಿ, ಜಿ.ಎಂ.ಪಾ ಟೀಲ,ಉಪಾಧ್ಯಕ್ಷ ಶಂಕರ ವಾಘಮೊಡೆ, ನಿರ್ದೇಶಕರಾದ ಗುರಬಸು ತೇವರಮನಿ, ಘೂಳಪ್ಪ ಜತ್ತಿ, ಸೌರಭ ಪಾಟೀಲ, ವಿಶ್ವನಾಥ ಪಾಟೀಲ, ಶಾಂತಿ ನಾಥ ನಂದೇಶ್ವರ, ರಮೇಶ ಪಟ್ಟಣ, ಮಲ್ಲಿ ಕಾರ್ಜುನ ಗೊಠಕಿಂಡಿ, ಶಿದ್ರಾಮ ನಾಯಿಕ, ಹಣಮಂತ ಜಗದೇವ, ಪ್ರಲ್ಹಾದ ಪಾಟೀಲ ಸುನಂದಾ ನಾಯಿಕ, ಡಿ.ಎಸ್. ಕುಲಕರ್ಣಿ,ಅಧಿಕಾರಿಗಳಾದ ಸುರೇಶ ಠಕ್ಕಣ್ಣವರ, ವಿನಾಯಕ ಮನಗುಳಿ, ಸಿ.ಎಸ್. ಪಾಟೀಲ, ಡಿ.ಬಿ.ದೇಸಾಯಿ, ವಿ.ಎಸ್. ಪಾಟೀಲ, ಅನಂತ ದೇಶ ಪಾಂಡೆಕಾರ್ಮಿಕರು ಸೇರಿದಂತೆ ಅನೇಕರು ಇದ್ದರು.



ಮೋಳೆ: ಕೃಷ್ಣಾ ಸಹಕಾರಿ ಸಕ್ಕರೆ ಕಾರ್ಖಾನೆ ಆವರಣದಲ್ಲಿ ಅಧ್ಯಕ್ಷ ಪರಪ್ಪಣ್ಣ ಸವದಿಯವರು ವನಮೋತ್ಸವ ನಿಮಿತ್ಯ ಏರ್ಪಡಿಸಿದ ಕಾರ್ಯಕ್ರಮದಲ್ಲಿ ಸಸಿಗಳನ್ನು ನೆಟ್ಟು ನೀರೇರೆಯುತ್ತಿರುವ ಚಿತ್ರ.

## ಅಥಣಿಯಲ್ಲಿ ವಿಶ್ವ ಪರಿಸರ ದಿನದ ಸಂಭ್ರಮ: ನಿವೇದಿತಾ ಶಾಲಾ ಆವರಣದಲ್ಲಿ 100 ಸಸಿಗಳ ನೆಡುವ ಕಾರ್ಯಕ್ರಮಕ್ಕೆ ಚಾಲನೆ

**ಬೆಳಗಾವಿ ವಾರ್ತೆ ಅಥಣಿ:** ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಪಟ್ಟಣದ ನಿವೇದಿತಾ ಆಂಗ್ಲ ಮಾಧ್ಯಮ ಶಾಲೆಯ ಆವರಣದಲ್ಲಿ ಶುಕ್ರವಾರ 100 ಸಸಿಗಳನ್ನು ನೆಡುವ ಕಾರ್ಯಕ್ರಮಕ್ಕೆ ವಿಧ್ಯುಕ್ತವಾಗಿ ಚಾಲನೆ ನೀಡಲಾಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ವಲಯ ಅರಣ್ಯಾಧಿಕಾರಿ ರಾಕೇಶ ಅರ್ಜುನವಾಡ ಪರಿಸರ ಸಂರಕ್ಷಣೆ ಪ್ರತಿಯೊಬ್ಬ ನಾಗರಿಕನ ಜವಾಬ್ದಾರಿ ಮಕ್ಕಳು ತಾವು ಶಿಕ್ಷಣದಲ್ಲಿ ಬೆಳೆಯುವಂತೆ ತಾವು ನೆಟ್ಟ ಸಸಿಗಳನ್ನೂ ಪೋಷಿಸಿ ದೊಡ್ಡ ಮರಗಳನ್ನಾಗಿ ಬೆಳೆಸಬೇಕು ಒಂದು ಮರ ನೂರು ಜೀವಗಳಿಗೆ ಆಸರೆಯಾಗುತ್ತದೆ ಎಂದು ಕಿವಿಮಾತು ಹೇಳಿದರು.

ಸಂಸ್ಥೆಯ ಅಧ್ಯಕ್ಷ ಬಿ.ಎಲ್. ಪಾಟೀಲ ಮಾತನಾಡಿ ನಾವು ಇಂದು ಕೇವಲ ಗಿಡಗಳನ್ನು ನೆಡುತ್ತಿಲ್ಲ, ಮಕ್ಕಳ ಉಜ್ವಲ ಭವಿಷ್ಯಕ್ಕಾಗಿ ಬೀಜ ಬಿತ್ತುತ್ತಿದ್ದೇವೆ ಈ ಸಸಿಗಳು ಮಕ್ಕಳು ತಮ್ಮ ಶಾಲಾ ಶಿಕ್ಷಣ ಪೂರ್ಣಗೊಳಿಸುವ ವೇಳೆಗೆ ಸುಂದರ ಅರಣ್ಯದಂತೆ ಬೆಳೆದು ನಿಲ್ಲಬೇಕು ಪರಿಸರ ಸಂರಕ್ಷಣೆ ಮತ್ತು ಗುಣಮಟ್ಟದ ಶಿಕ್ಷಣ ಎರಡೂ ಸಮಾಜದ ಸರ್ವಾಂಗೀಣ ಅಭಿವೃದ್ಧಿಗೆ ಪೂರಕವಾಗಿವೆ ಎಂದು ಅಭಿಪ್ರಾಯಪಟ್ಟರು.




ಇನ್ನೂ ತಾಲೂಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ರಾಕೇಶ ಮೈಗೂರ ಮಾತನಾಡಿ ವಿಶ್ವ ಪರಿಸರ ದಿನಾಚರಣೆಯನ್ನು ಕೇವಲ ಜೂನ್ 5ರ ಒಂದು ದಿನದ ಆಚರಣೆಗೆ ಸೀಮಿತಗೊಳಿಸಬಾರದು ಪರಿಸರ ನಮಗೆ ಶುದ್ಧ ಗಾಳಿ ನೀರು ಹಾಗೂ ಆರೋಗ್ಯಕರ ಜೀವನವನ್ನು ನೀಡುತ್ತಿದೆ ಆದ್ದರಿಂದ ಪರಿಸರವನ್ನು ಬೆಳೆಸಿ ಉಳಿಸುವ ಕಾರ್ಯ ನಿರಂತರವಾಗಿರಬೇಕು ಪ್ರತಿಯೊಬ್ಬರೂ ತಮ್ಮ ಜನ್ಮದಿನದಂದು ಒಂದೊಂದು ಗಿಡ ನೆಡುವ ಸಂಕಲ್ಪ ಮಾಡಬೇಕೆಂದರು

ಶಾಲೆಯ ಮುಖ್ಯಸ್ಥ ಸಂತೋಷ ಬಡಕಂಬಿ ಮಾತನಾಡಿ ಅರಣ್ಯ ಇಲಾಖೆಯವರು ನಮ್ಮ ಶಾಲೆಯ ಮೇಲೆ ವಿಶ್ವಾಸವಿಟ್ಟು 100 ಸಸಿಗಳನ್ನು ನೀಡಿದ್ದಾರೆ ಇದನ್ನು ನಾವು ಜವಾಬ್ದಾರಿಯಿಂದ ಪೋಷಿಸುತ್ತೇವೆ ಪ್ರತಿ ವಿದ್ಯಾರ್ಥಿಗೆ ಒಂದೊಂದು ಸಸಿಯನ್ನು ದತ್ತು ನೀಡಿ ಆಯಾ ಸಸಿಗೆ ಮಗುವಿನ ಹೆಸರಿನ ನಾಮಫಲಕ ಅಳವಡಿಸಲಾಗುವುದು ಮಕ್ಕಳೇ ಆ ಸಸಿಗಳ ಪೋಷಕರಾಗಲಿದ್ದಾರೆ ಶಾಲೆಯ ಆಡಳಿತ ಮಂಡಳಿಯೂ ಸಸಿಗಳ ಆರೈಕೆಗೆ ವಿಶೇಷ ವ್ಯವಸ್ಥೆ ಮಾಡಲಿದೆ ಎಂದು ತಿಳಿಸಿದರು.

ಹಾಗೆಯೇ ಹೊಂಗೆ, ಬೇವು, ನೇರಳೆ, ಸಿಲ್ವರ್ ಓಕ್ ಸೇರಿದಂತೆ ವಿವಿಧ ಜಾತಿಯ ಸಸಿಗಳನ್ನು ನೆಡಲಾಯಿತು.

ಈ ಸಂದರ್ಭದಲ್ಲಿ ಶಾಲೆಯ ಮುಖ್ಯೋಪಾಧ್ಯಾಯ ಮಲ್ಲಿಕಾರ್ಜುನ ನಿಗಾಡಿ, ದಲಿತ ಮುಖಂಡ ಮಾಂತೇಶ ಬಾಡಗಿ, ಶಿಕ್ಷಕಿಯರಾದ ವಿದ್ಯಾ ತೇವರಟ್ಟಿ, ಭಾರತಿ ಖಿಲಾರೆ, ಸುಧಾರಾಣಿ ಕೊರೆ, ಗೀತಾ ಕನ್ನೂರ, ಪೂರ್ಣಿಮಾ ಚೌಗಲಾ, ಎಸ್.ಎಸ್. ಗುಡೋಡಗಿ, ಶೈಲಾ ಇಂಗಳೇಶ್ವರ ಸೇರಿದಂತೆ ಅರಣ್ಯ ಇಲಾಖೆಯ ಸಿಬ್ಬಂದಿ, ಶಾಲಾ ಶಿಕ್ಷಕರು, ವಿದ್ಯಾರ್ಥಿಗಳು & ಪರಿಸರ ಪ್ರೇಮಿಗಳು ಉಪಸ್ಥಿತರಿದ್ದರು.

# ಸಮಗ್ರ ಪರಿಷ್ಕರಣೆ ಕಾರ್ಯ ಸುವ್ಯವಸ್ಥಿತವಾಗಿ ಜರುಗಲು ರಾಜಕೀಯ ಪಕ್ಷಗಳು, ಸಾರ್ವಜನಿಕರ ಸಹಕಾರ ಅಗತ್ಯ

**ಬೆಳಗಾವಿ ವಾರ್ತೆ ಧಾರವಾಡ:** ಧಾರವಾಡ ಜಿಲ್ಲೆಯಾದ್ಯಂತ ಜೂನ್ 30 ರಿಂದ ಅಕ್ಟೋಬರ್ 7 ರವರೆಗೆ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ನಡೆಯಲಿದೆ. ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯ ಸುವ್ಯವಸ್ಥಿತವಾಗಿ ಜರುಗಲು ರಾಜಕೀಯ ಪಕ್ಷಗಳು, ಸಾರ್ವಜನಿಕರು ಸಹಕಾರ ನೀಡುವುದು ಅಗತ್ಯವಿದೆ ಎಂದು ಜಿಲ್ಲಾ ಚುನಾವಣಾ ಅಧಿಕಾರಿಗಳಾಗಿರುವ ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ಹೇಳಿದರು.

ಅವರು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ–2026 ಕಾರ್ಯವನ್ನು ಧಾರವಾಡ ಜಿಲ್ಲೆಯಲ್ಲಿ ಕೈಗೊಳ್ಳಲಾಗಿದೆ. ಪರಿಷ್ಕರಣೆ ಕಾರ್ಯದ ವೇಳಾಪಟ್ಟಿಯಂತೆ ಮತದಾರರ ಪಟ್ಟಿಯ ಅರ್ಹತಾ ದಿನಾಂಕವನ್ನು 01.10.2026 ನಿಗದಿಪಡಿಸಲಾಗಿದೆ. ಜೂನ್ 20 ರಿಂದ ಜೂನ್ 29 ರವರೆಗೆ ಮತದಾರರ ಪಟ್ಟಿ ತಯಾರಿ, ತರಬೇತಿ ಮತ್ತು ಮುದ್ರಣ ಕಾರ್ಯಗಳನ್ನು ಕೈಗೊಳ್ಳಲಾಗುವುದು. ಬಿಎಲ್‌ಓಗಳು ಜೂನ್ 30 ರಿಂದ ಜುಲೈ 29 ರವರೆಗೆ ಮನೆ ಮನೆಗೆ ಭೇಟಿ ನೀಡುವರು. ಕರಡು ಮತದಾರರ ಪಟ್ಟಿಯನ್ನು ಆಗಸ್ಟ 5 ರಂದು ಪ್ರಕಟಿಸಲಾಗುವುದು. ಆಕ್ಷೇಪಣೆಗಳನ್ನು ಸಲ್ಲಿಸಲು ಆಗಸ್ಟ 5 ರಿಂದ ಸೆಪ್ಟೆಂಬರ್ 4 ರವರೆಗೆ ಕಾಲಾವಕಾಶ ನೀಡಲಾಗಿದೆ. ಆಕ್ಷೇಪಣೆಗಳ ವಿಲೇವಾರಿಯನ್ನು ಆಗಸ್ಟ 5 ರಿಂದ ಅಕ್ಟೋಬರ್ 3 ರವರೆಗೆ ಕೈಗೊಳ್ಳಲಾಗುತ್ತದೆ. ಅಂತಿಮ ಮತದಾರರ ಪಟ್ಟಿಯನ್ನು ಅಕ್ಟೋಬರ್ 7 ರಂದು ಪ್ರಕಟಣೆ ಮಾಡಲಾಗುವುದು ಎಂದು ಅವರು ತಿಳಿಸಿದರು.



ಜಿಲ್ಲೆಯ ಏಳು ವಿಧಾನಸಭಾ ಕ್ಷೇತ್ರಗಳಲ್ಲಿ ಒಟ್ಟು 1,665 ಮತಗಟ್ಟೆಗಳಿದ್ದು, ಒಟ್ಟು 16,22,294 ಮತದಾರರಿದ್ದಾರೆ. ಅದರಲ್ಲಿ 8,05,624 ಪುರುಷರು, 8,16,572 ಮಹಿಳೆಯರು ಹಾಗೂ 98 ತೃತೀಯ ಲಿಂಗದ ಮತದಾರರು ಸೇರಿದ್ದಾರೆ. ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ಕಾಗಿ ಜಿಲ್ಲೆಯ 1,665 ಮತಗಟ್ಟೆಗಳಲ್ಲಿ 1,665 ಬಿಎಲ್‌ಒಗಳು ಮತ್ತು 230 ಬಿಎಲ್‌ಒ ಮೇಲ್ವಿಚಾರಕರನ್ನು ನೇಮಕ ಮಾಡಲಾಗಿದೆ ಎಂದರು.

ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಮತ್ತು ಭಾರತೀಯ ಜನತಾ ಪಾರ್ಟಿಗೆ ಸಂಬಂಧಿಸಿದಂತೆ ಮಾತ್ರ ಬಿಎಲ್‌ಎಗಳ ನೇಮಕವಾಗಿದ್ದು ಬಾಕಿ ಉಳಿದ ರಾಜಕೀಯ ಪಕ್ಷಗಳು ತಕ್ಷಣ ಬಿಎಲ್‌ಎಗಳ ನೇಮಕಾತಿ ಮಾಡಿದ ಬಗ್ಗೆ ಬಿಎಲ್‌ಎ–2 ನಮೂನೆಗಳನ್ನು ಆಯಾ ವಿಧಾನಸಭಾ ಕ್ಷೇತ್ರಗಳ ಮತದಾರರ ನೋಂದಣಾಧಿಕಾರಿಗಳಿಗೆ ತಕ್ಷಣ ಸಲ್ಲಿಸಿ ಸ್ವೀಕೃತಿ ಪಡೆಯಬೇಕು. ಬಿಎಲ್‌ಎ ಗಳನ್ನು ನೇಮಕಾತಿ ಮಾಡದೇ ಇರುವ ರಾಜಕೀಯ ಪಕ್ಷಗಳು ಕೂಡಲೇ ಬಿಎಲ್‌ಎ ಗಳನ್ನು ನೇಮಕ ಮಾಡಬೇಕಿದೆ ಎಂದರು.

ಜಿಲ್ಲೆಯಲ್ಲಿ ಮತದಾರರ ಅನುಕೂಲಕ್ಕಾಗಿ ಮತ್ತು ಸಹಾಯಕ್ಕಾಗಿ ವಿಶೇಷ ಕ್ಯಾಂಪ್‌ಗಳನ್ನು ಏರ್ಪಡಿಸಲು ಮತದಾರರ ಸೌಲಭ್ಯ ಕೇಂದ್ರ (ಗಿಈಅ) ಗಳನ್ನು ಸ್ಥಾಪಿಸಲಾಗಿದೆ. ವಿಧಾನಸಭಾ ಕ್ಷೇತ್ರವಾರು 1,665 ಮತಗಟ್ಟೆಗಳಿಗೆ 452 ಕೇಂದ್ರಗಳನ್ನು ತೆರೆಯಲಾಗಿದೆ. ಮತದಾರರಿಂದ ಸ್ವೀಕೃತವಾಗುವ ನಮೂನೆ ಹಾಗೂ ಅಗತ್ಯ ದಾಖಲೆಗಳನ್ನು ಅಪ್‌ಲೋಡ್ ಮಾಡಲು ಬಿಎಲ್‌ಒಗಳಿಗೆ ತಾಂತ್ರಿಕ ನೆರವನ್ನು ಒದಗಿಸಲಾಗುವುದು. ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯವನ್ನು ಗ್ರಾಮ ಆಡಳಿತಾಧಿಕಾರಿ ಕಚೇರಿ, ಪಂಚಾಯತ ಕಟ್ಟಡಗಳು (ಪಿಡಿಒ ಕಛೇರಿ), ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ವಿವಿಧ ಯೋಜನೆಗಳ ಅಡಿಯಲ್ಲಿ ಅನುದಾನ ಪಡೆದು ನಿರ್ಮಿಸಿರುವ ಸಮುದಾಯ ಭವನಗಳು, ನಗರ ಪ್ರದೇಶಗಳಲ್ಲಿ ವಾರ್ಡ್ ಕಚೇರಿಗಳು, ಮುಖ್ಯ ಪೌರಾಯುಕ್ತರ ಕಚೇರಿಗಳು, ತಾಲ್ಲೂಕು ಕೇಂದ್ರದಲ್ಲಿ ತಾಲ್ಲೂಕು ಕಚೇರಿ (ತಹಶೀಲ್ದಾರರ ಕಚೇರಿ) ,ಗ್ರಾಮ ಒನ್, ನಾಡ ಕಚೇರಿಗಳಲ್ಲಿ ಬಿಎಲ್‌ಒ ಸೌಲಭ್ಯ ಕೇಂದ್ರಗಳನ್ನು ಸ್ಥಾಪಿಸಲಾಗಿದೆ ಎಂದು ತಿಳಿಸಿದರು.

ಮತದಾರರ ಅನುಕೂಲಕ್ಕಾಗಿ ಜಿಲ್ಲೆಯಾದ್ಯಂತ 509 ಬಿಎಲ್‌ಒ ಸೌಲಭ್ಯ ಕೇಂದ್ರಗಳನ್ನು ಗುರುತಿಸಲಾಗಿದೆ. ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯದಲ್ಲಿ ಪ್ರಮುಖವಾಗಿ ಕಾರ್ಯನಿರ್ವಹಿಸುವ ಬಿಎಲ್‌ಒ ಗಳು, ಬಿಎಲ್‌ಒ ಮೇಲ್ವಿಚಾರಕರು ಮತ್ತು ಬಿಎಲ್‌ಎ ಅವರಿಗೆ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯದ ಬಗ್ಗೆ ವಿವರವಾದ ತರಬೇತಿ ನೀಡಲು ವಿಧಾನ ಸಭೆ ಕ್ಷೇತ್ರವಾರು ತರಬೇತಿ ಕಾರ್ಯಗಾರಗಳನ್ನು ಏರ್ಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ವಿವರಿಸಿದರು.

ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಕುರಿತು ಟಿವಿ ಸುದ್ದಿ ವಾಹಿನಿಗಳು, ಮುದ್ರಣ ಮಾಧ್ಯಮ ಮತ್ತು ಸಾಮಾಜಿಕ ಮಾಧ್ಯಮಗಳಲ್ಲಿ ವರದಿಯಾದ ಯಾವುದೇ ಸಮಸ್ಯೆಗಳನ್ನು ಗುರುತಿಸಿ, ನಿಯಮಿತ ಪ್ರತಿಕ್ರಿಯೆಯನ್ನು ಒದಗಿಸಲು, ಕುಂದುಕೊರತೆ ಪರಿಹಾರವನ್ನು ಸುಗಮಗೊಳಿಸಲು ಮತ್ತು ಯಾವುದೇ ಸಂಭವನೀಯ ತಪ್ಪು ಮಾಹಿತಿ ಅಥವಾ ತಪ್ಪು ಮಾಹಿತಿಯ ವಿರುದ್ಧ ಸಕಾಲಿಕ ಕ್ರಮವನ್ನು ಖಚಿತಪಡಿಸಿ ಕೊಳ್ಳಲು ಮಾಧ್ಯಮ ಮೇಲ್ವಿಚಾರಣಾ ಕೇಂದ್ರ (ಎಂಎಂಸಿ)ವನ್ನು ಸ್ಥಾಪಿಸಲಾಗಿದೆ. ಈ ಕೇಂದ್ರದಲ್ಲಿ ಕಾರ್ಯನಿರ್ವಹಿಸಲು ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ. ಕೇಂದ್ರದ ಒಟ್ಟಾರೆ ಮೇಲ್ವಿಚಾರಣೆಗೆ ಜಿಲ್ಲಾ ಮಟ್ಟದ ಎಂಎಂಸಿ ನೋಡಲ್ ಅಧಿಕಾರಿಯಾಗಿ ದೇವರಾಜ್ ಅರಸು ನಿಗಮದ ಜಿಲ್ಲಾ ವ್ಯವಸ್ಥಾಪಕ ಕುಶಾಲ ಚೌಗಲಾ (ಮೊ:7406979074) ಅವರನ್ನು ನೇಮಕ ಮಾಡಲಾಗಿರುತ್ತದೆ. ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆಗೆ ಸಂಪೂರ್ಣ ಪ್ರಕ್ರಿಯೆಯ ಮೇಲ್ವಿಚಾರಣೆಗಾಗಿ ಜಿಲ್ಲಾ ನೋಡಲ್ ಅಧಿಕಾರಿಯಾಗಿ ಕೆಎನ್‌ಎನ್‌ಎಲ್ ನ ಮುಖ್ಯ ಆಡಳಿತಾಧಿಕಾರಿ ಎಸ್.ಎನ್. ರುದ್ರೇಶ (ಮೊ: 8277833377) ಅವರನ್ನು ನಿಯೋಜಿಸಲಾಗಿದೆ ಎಂದು ಅವರು ಹೇಳಿದರು.

# ವಿಶ್ವ ಪರಿಸರ ದಿನಾಚರಣೆ



**ಬೆಳಗಾವಿ ವಾರ್ತೆ ನವಲಗುಂದ:** ಪರಿಸರ ಪೂರಕ ವಾತಾವಣ ನಿರ್ಮಿಸುವುದು ಎಲ್ಲರ ಕರ್ತವ್ಯವಾಗಿದೆ. ಹಸಿರು ಕ್ರಾಂತಿಯಾದರೆ. ನೆಮ್ಮದಿಯ ಬದುಕು ಸಾದ್ಯ ಎಂದು ಎಚ್ ಪಿ ಎಸ್ ನಂ 6 ಶಾಲೆಯ ಪ್ರಭಾರ ಮುಖ್ಯ ಶಿಕ್ಕಿ ಎಸ್ ಬಿ ಬಡಿಗೇರ ಹೇಳಿದರು. ಅವರು ಪಟ್ಟಣದ ಬಸವೇಶ್ವರ ನಗರದ ಸರಕಾರಿ ಶಾಲೆಯಲ್ಲಿ ವಿಶ್ವ ಪರಿಸರ ದಿನಾಚರಣೆಯಲ್ಲಿ ಮಾತನಾಡಯತ್ತಿದ್ದರು. ಮಕ್ಕಳು ತಮ್ಮ ಮನೆಯ ಸುತ್ತಲಿ ಪ್ರದೇಶ ಹಸಿರುಮಯ ಮಾಡಿ ಸ್ವಚ್ಚತೆಗೆ ಗಮನ ನೀಡಿ ಉತ್ತಮ ಪರಿಸರ ನಿರ್ಮಿಸೋಣ ಎಂದರು. ಶಾಲೆಯ ಎಸ್ ಡಿ ಎಮ್ ಸಿ ಸದಸ್ಯರಾದ ರಜಿಯಾ ಕೂಟೂರು. ಸೈರಾಬಾನು ಮೊಕಾಶಿ ಹಾಗೂ ಬಿ ಆರ್ ಸಿ ಸಿದ್ದಪ್ಪ ರಾಯಗೊಣ್ಣವರ. ದೈಹಿಕ ಶಿಕ್ಕಕ ಎಸ್. ಎಮ್. ತಲಬಟ್ಟಿ. ಶಿಕ್ಷಕಿಯರಾದ ಪಿ.ಎಮ್ . ಪಾಪನಶಿ. ಜೆ. ವ್ಹಿ. ಬೋಳನ್ನವರ. ವಿದ್ಯಾರ್ಥಿಗಳು ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು.

# ಪರಿಸರ ರಕ್ಷಣೆ: ಜಾಗೃತಿ ಕಾರ್ಯಕ್ರಮ



**ಬೆಳಗಾವಿ ವಾರ್ತೆ ಲಕ್ಷೇಶ್ವರ:** ವಿಶ್ವ ಪರಿಸರ ದಿನದ ಅಂಗವಾಗಿ ಎಸ್‌ಟಿಪಿಎಂಬಿ ಸಂಸ್ಥೆಯ ಎಸ್‌ಎಂಜೆವಿಜಿ ಪದವಿಪೂರ್ವ ಕಾಲೇಜಿನಲ್ಲಿ ಪರಿಸರ ರಕ್ಷಣೆಯ ಕುರಿತು ಜಾಗೃತಿ ಕಾರ್ಯಕ್ರಮವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು. ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲರಾದ ಸರಸ್ವತಿ ಹುಲ್ಲಣ್ಣವರ ಅವರು ಮಾತನಾಡಿ, ಪರಿಸರದ ಸಂರಕ್ಷಣೆ ಪ್ರತಿಯೊಬ್ಬರ ಕರ್ತವ್ಯವಾಗಿದ್ದು, ಮರಗಳನ್ನು ನೆಡುವುದು, ನೀರನ್ನು ಮಿತವಾಗಿ ಬಳಸುವುದು ಹಾಗೂ ಪರಿಸರ ಸ್ನೇಹಿ ಜೀವನಶೈಲಿಯನ್ನು ಅಳವಡಿಸಿಕೊಳ್ಳುವುದು ಇಂದಿನ ಅಗತ್ಯವಾಗಿದೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ವಿದ್ಯಾರ್ಥಿನಿಯರು ಪರಿಸರ ಸಂರಕ್ಷಣೆಯ ಮಹತ್ವವನ್ನು ಸಾರುವ ಪ್ರತಿಜ್ಞೆಯನ್ನು ಸ್ವೀಕರಿಸಿದರು. ಕಾಲೇಜು ಆವರಣದಲ್ಲಿ ಸಸಿ ನೆಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು. ವಿದ್ಯಾರ್ಥಿನಿಯರು ಹಾಗೂ ಉಪನ್ಯಾಸಕರು ಪರಿಸರ ಸಂರಕ್ಷಣೆಗೆ ತಮ್ಮ ಬದ್ಧತೆಯನ್ನು ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಉಪನ್ಯಾಸಕರು, ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿನಿಯರು ಭಾಗವಹಿಸಿ, ಹಸಿರು ಪರಿಸರ ನಿರ್ಮಾಣಕ್ಕೆ ತಮ್ಮ ಸಹಕಾರ ನೀಡುವ ಸಂಕಲ್ಪ ಮಾಡಿದರು.

# ವಿಶ್ವ ಪರಿಸರ ದಿನಾಚರಣೆ



**ಬೆಳಗಾವಿ ವಾರ್ತೆ ಗದಗ :** ನಗರಸಭೆ ಸಂಯುಕ್ತ ಪದವಿ ಪೂರ್ವ ಮಹಾವಿದ್ಯಾಲಯ, ಗದಗ ಎನ್.ಎಸ್.ಎಸ್. ಘಟಕ ಹಾಗೂ ಸ್ಕೌಟ್ & ಗೈಡ್ಸ್ ಸಹಯೋಗದಲ್ಲಿ ವಿಶ್ವ ಪರಿಸರ ದಿನಾಚರಣೆಯನ್ನು ಸಸಿ ನೆಡುವುದರ ಮೂಲಕ ವಿದ್ಯಾರ್ಥಿಗಳಿಗೆ ಪರಿಸರದ ಬಗ್ಗೆ ಅರಿವು ಮೂಡಿಸಲಾಯಿತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಜಿಲ್ಲಾ ಉಪನ್ಯಾಸಕ ಸಂಘದ ಅದ್ಯಕ್ಷರಾದ ಎಸ್.ಎಸ್.ಸೋಮಣ್ಣವರ ಮಾತನಾಡಿ ವಿಶ್ವ ಪರಿಸರ ದಿನವನ್ನು ಪ್ರತಿ ವರ್ಷ ಜೂನ್ 5 ರಂದು ಆಚರಿಸಲಾಗುತ್ತದೆ. ಪರಿಸರದ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಪ್ರಕೃತಿಯನ್ನು ಸಂರಕ್ಷಿಸಲು ಈ ದಿನವನ್ನು ವಿಶ್ವಸಂಸ್ಥೆಯು 1974 ರಲ್ಲಿ ಪ್ರಾರಂಭಿಸಿತು. ಇದು ಪ್ರತಿಯೊಬ್ಬರು ಮರಗಳನ್ನು ನೆಡಲು, ಪ್ಲಾಸ್ಟಿಕ್ ಬಳಸುವುದನ್ನು ತಪ್ಪಿಸಲು ಮತ್ತು ಭೂಮಿಯನ್ನು ಮಾಲಿನ್ಯದಿಂದ ರಕ್ಷಿಸಲು ಪ್ರೇರೇಪಿಸುತ್ತದೆ ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಚಾರ್ಯರಾದ ಎಸ್.ಎಸ್. ಕುಲಕರ್ಣಿ, ಎನ್.ಎಸ್.ಎಸ್. ಅಧಿಕಾರಿಗಳಾದ ಡಾ. ಸುಜಾತಾ ಮಾಗಡಿ, ಶ್ರೀಮತಿ ಜಯಶ್ರೀ ಅಂಗಡಿ, ರಾಜೇಂದ್ರ ಹಿರೇಮಠ, ಎಸ್.ಬಿ. ಪಾಟೀಲ, ವ್ಹಿ.ಬಿ. ಕರಮುಡಿ, ಪಿ.ಎಸ್. ಗೊರವರ, ಶಂಕರ ಹಟ್ಟಿ, ಕೆ.ಟಿ. ವಡ್ಡಿನ , ರಮೇಶ. ಡಿ, ಶ್ರೀಮತಿ ಅಮನ್ ಗುಳೇದಗುಡ್ಡ, ಕಾಲೇಜಿನ ಎಲ್ಲ ವಿದ್ಯಾರ್ಥಿಗಳು ಭಾಗಿಯಾಗಿದ್ದರು.

# ಬಿಸಿಎಂ : ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಕ್ಕೆ ಪ್ರವೇಶ

**ಬೆಳಗಾವಿ ವಾರ್ತೆ ಬಾಗಲಕೋಟೆ:** ಪ್ರಸಕ್ತ ಸಾಲಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ಪೂರ್ವ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳಲ್ಲಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ–1, 2ಎ, 2ಬಿ, 3ಎ, 3ಬಿ, ಪ. ಜಾತಿ, ಪ. ಪಂಗಡ ವರ್ಗಗಳ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳ ಪೋಷಕರ ವಾರ್ಷಿಕ ಆದಾಯ ಪ್ರವರ್ಗ–1, ಎಸ್‌ಸಿ, ಎಸ್‌ಟಿಗೆ 2.50 ಲಕ್ಷ ರೂ., ಪ್ರವರ್ಗ 2ಎ, 2ಬಿ, 3ಎ, 3ಬಿಗಳಿಗೆ 1 ಲಕ್ಷ ರೂ. ಮೀರಿರಬಾರದು. ಅರ್ಜಿಗಳನ್ನು ಜೂನ್ 8 ರೊಳಗಾಗಿ ವೆಬ್‌ಸೈಟ್ http://shp.karnataka.gov.in/bcwd ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂಖ್ಯೆ 8050770004ಗೆ ಸಂಪರ್ಕಿಸುವಂತೆ ಬಾಗಲಕೋಟೆ, ಹುನಗುಂದ ಹಾಗೂ ಬೀಳಗಿ ತಾಲೂಕಾ ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗದಗ ಜಿಲ್ಲೆಯಲ್ಲಿ ಮಹಿಳಾ ಸಬಲೀಕರಣಕ್ಕೆ ಮಾದರಿಯಾದ ಮತ್ಸ್ಯ ಸಂಜೀವಿನಿ ಯೋಜನೆ ಮೀನುಗಾರಿಕೆಯಿಂದ ಸ್ವಸಹಾಯ ಸಂಘದ ಮಹಿಳೆಯರಿಗೆ ಉತ್ತಮ ಆದಾಯ...!

**ಬೆಳಗಾವಿ ವಾರ್ತೆ ಗದಗ:** DAY-NRLM ಸಂಜೀವಿನಿ ಯೋಜನೆಯಡಿ ಅನುಷ್ಠಾನಗೊಂಡಿರುವ “ಮತ್ಸ್ಯ ಸಂಜೀವಿನಿ” ಯೋಜನೆಯು ಗದಗ ಜಿಲ್ಲೆಯ ಗ್ರಾಮೀಣ ಮಹಿಳೆಯರ ಆರ್ಥಿಕ ಸಬಲೀಕರಣಕ್ಕೆ ಹೊಸ ದಿಕ್ಕು ತೋರಿಸಿದೆ.

ತಾಲೂಕಿನ ಹಾತಲಗೇರಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಸಂಬಾಪುರ ಗ್ರಾಮದ ಪ್ರಕೃತಿ ಸಂಜೀವಿನಿ ಮಹಿಳಾ ಸ್ವಸಹಾಯ ಸಂಘದ ಸದಸ್ಯರು ಮೀನು ಸಾಕಾಣಿಕೆ ಮೂಲಕ ಉತ್ತಮ ಆದಾಯ ಗಳಿಸಿ ಇತರ ಮಹಿಳೆಯರಿಗೆ ಮಾದರಿಯಾಗಿದ್ದಾರೆ.

ಜಿಲ್ಲೆಯಾದ್ಯಂತ 16 ಗ್ರಾಮ ಪಂಚಾಯತ್ ಮಟ್ಟದ ಕೆರೆಗಳನ್ನು ಗ್ರಾಮ ಪಂಚಾಯತ್ ಮಟ್ಟದ ಒಕ್ಕೂಟಗಳ ಮೂಲಕ ಗುತ್ತಿಗೆ ಪಡೆದು ಸ್ವಸಹಾಯ ಸಂಘಗಳ ಸದಸ್ಯರಿಗೆ ಮೀನುಗಾರಿಕೆ ಚಟುವಟಿಕೆ ಕೈಗೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಈ ಮಹತ್ವಾಕಾಂಕ್ಷಿ ಯೋಜನೆಯಡಿ ಹಾತಲಗೇರಿ ಗ್ರಾಮ ಪಂಚಾಯತ್ ಮಟ್ಟದ ಒಕ್ಕೂಟ ಹಾಗೂ ಪ್ರಕೃತಿ ಸಂಜೀವಿನಿ ಮಹಿಳಾ ಸ್ವಸಹಾಯ ಸಂಘದ ಸದಸ್ಯರು ಕೈಜೋಡಿಸಿ ಯಶಸ್ವಿ ಮೀನುಗಾರಿಕೆ ಮಾದರಿಯನ್ನು ನಿರ್ಮಿಸಿದ್ದಾರೆ.

**ಹೋರಾಟದಿಂದ ಆರಂಭವಾದ ಪಯಣ:** ಪ್ರಕೃತಿ ಸಂಜೀವಿನಿ ಮಹಿಳಾ ಸ್ವಸಹಾಯ ಸಂಘದ ಸದಸ್ಯರು ಆರ್ಥಿಕವಾಗಿ ಹಿಂದುಳಿದ ಕುಟುಂಬಗಳಿಗೆ ಸೇರಿದವರಾಗಿದ್ದು, ಅಲ್ಪ ಪ್ರಮಾಣದ ಕೃಷಿ ಹಾಗೂ ಕೂಲಿ ಕೆಲಸಗಳನ್ನೇ ಅವಲಂಬಿಸಿ ಜೀವನ ಸಾಗಿಸುತ್ತಿದ್ದರು. ಕುಟುಂಬದ ಅಗತ್ಯಗಳನ್ನು ಪೂರೈಸುವುದು ಕೂಡ ಸವಾಲಾಗಿದ್ದ ಸಂದರ್ಭದಲ್ಲಿ ಸಂಜೀವಿನಿ ಯೋಜನೆಯಡಿ ಅವರನ್ನು ಗುರುತಿಸಿ ಹೊಸ ಜೀವನೋಪಾಯದ ಅವಕಾಶ ಒದಗಿಸಲಾಯಿತು.

ಕಳೆದ ವರ್ಷ 2025 ರಲ್ಲಿ ಜಿಲ್ಲಾ ಪಂಚಾಯತ್ ಗದಗ ಜಿಲ್ಲಾ ಸಂಪನ್ಮೂಲ ಕೇಂದ್ರ, ಹುಲಕೋಟೆಯಲ್ಲಿ ಗದಗ ಮೀನುಗಾರಿಕೆ ಇಲಾಖೆಯ ಸಹಯೋಗದೊಂದಿಗೆ ಮೂರು ದಿನಗಳ ವಸತಿ ಸಹಿತ ವಿಶೇಷ ತರಬೇತಿ ನೀಡಲಾಗಿತ್ತು. ತರಬೇತಿಯಲ್ಲಿ ಮೀನು ಸಾಕಾಣಿಕೆಯ ವೈಜ್ಞಾನಿಕ ವಿಧಾನಗಳು, ಕೆರೆ ನಿರ್ವಹಣೆ, ಮೀನುಗಳ ಪೋಷಣೆ, ಆಹಾರ ನಿರ್ವಹಣೆ ಹಾಗೂ ಮಾರುಕಟ್ಟೆ ಸಂಪರ್ಕದ ಕುರಿತು ಸಮಗ್ರ ಮಾಹಿತಿ ನೀಡಿದ್ದರು.



**ಕೆರೆಯಿಂದ ಆರಂಭವಾದ ಹೊಸ ಬದುಕು:** ತರಬೇತಿ ಪೂರ್ಣಗೊಂಡ ಬಳಿಕ ಹಾತಲಗೇರಿ ಗ್ರಾಮ ಪಂಚಾಯತ್ ವ್ಯಾಪ್ತಿಯ ಅಮೃತ ಸರೋವರ ಯೋಜನೆಯಡಿ ನಿರ್ಮಿಸಲಾದ ಕೆರೆಯನ್ನು ನಿಯಮಾನುಸಾರ ಗ್ರಾಮ ಪಂಚಾಯತ್ ಮಟ್ಟದ ಒಕ್ಕೂಟ ಗುತ್ತಿಗೆ ಪಡೆದುಕೊಂಡಿತು. ನಂತರ ಒಕ್ಕೂಟ ಮತ್ತು ಪ್ರಕೃತಿ ಸಂಜೀವಿನಿ ಮಹಿಳಾ ಸ್ವಸಹಾಯ ಸಂಘದ ನಡುವೆ ಒಪ್ಪಂದ ಮಾಡಿಕೊಂಡು ಮೀನುಗಾರಿಕೆ ಚಟುವಟಿಕೆಗೆ ಚಾಲನೆ ನೀಡಲಾಯಿತು.

ಮೀನುಗಾರಿಕೆ ಇಲಾಖೆಯ ಮಾರ್ಗದರ್ಶನದಲ್ಲಿ ಸುಮಾರು 12,000 ಕಟ್ಲಾ ಮತ್ತು ರೋಹು ಮೀನು ಮರಿಗಳನ್ನು ಕೆರೆಗೆ ಬಿಡಲಾಯಿತು.

**ತಾಲೂಕು ಸಂಜೀವಿನಿ ಯೋಜನೆ ಅಧಿಕಾರಿ:** ಸಿದ್ದು ಸತ್ಯನ್ನವರ ಅಶ್ವಿನಿ ಪಾಟೀಲ, ಕೃಷಿ ಸಖಿಯರು ಹಾಗೂ ಪಶು ಸಖಿಯರು ನಿರಂತರ ತಾಂತ್ರಿಕ ಸಲಹೆ ಮತ್ತು ಮಾರ್ಗದರ್ಶನ ನೀಡಿದರು. ಮಹಿಳೆಯರು ಪ್ರತಿದಿನ ಕೆರೆಯ ನಿರ್ವಹಣೆ, ಮೀನುಗಳಿಗೆ ಆಹಾರ ಒದಗಿಸುವುದು ಹಾಗೂ ಬೆಳವಣಿಗೆಯ ಮೇಲ್ವಿಚಾರಣೆ ಮಾಡುವ ಜವಾಬ್ದಾರಿಯನ್ನು ಸಮರ್ಥವಾಗಿ ನಿರ್ವಹಿಸಿದರು.

ಸುಮಾರು ಎಂಟು ರಿಂದ ಒಂಬತ್ತು ತಿಂಗಳ ನಿರಂತರ ಪರಿಶ್ರಮದ ನಂತರ ಕೆರೆಯಲ್ಲಿ ಬೆಳೆದ ಮೀನುಗಳನ್ನು ಕೊಯ್ಲು ಮಾಡಲಾಯಿತು. ಮೊದಲ ಹಂತದ ಕೊಯ್ಲಿನಲ್ಲಿ ಸುಮಾರು 60 ಕೆ.ಜಿ. ಮೀನುಗಳನ್ನು ಸಂಗ್ರಹಿಸಿ ಸ್ಥಳೀಯ ಮಾರುಕಟ್ಟೆಯಲ್ಲಿ ಪ್ರತಿ ಕೆ.ಜಿಗೆ ?65 ದರದಲ್ಲಿ ಮಾರಾಟ ಮಾಡಲಾಯಿತು. ಮೀನುಗಳ ತೂಕ ಸರಾಸರಿ 700 ಗ್ರಾಂನಿಂದ 1 ಕೆ.ಜಿ.ವರೆಗೆ ಇತ್ತು. ಮೀನು ಮಾರಾಟದಿಂದ ದೊರೆತ ಆದಾಯ ಮಹಿಳೆಯರ ಕುಟುಂಬಗಳ ಆರ್ಥಿಕ ಸ್ಥಿತಿ ಸುಧಾರಿಸಲು ನೆರವಾಗಿದೆ.

**ಆತ್ಮವಿಶ್ವಾಸದ ಹೊಸ ಅಧ್ಯಾಯ:** ಮತ್ಸ್ಯ ಸಂಜೀವಿನಿ ಯೋಜನೆಯು ಕೇವಲ ಆದಾಯವನ್ನಷ್ಟೇ ನೀಡದೆ ಮಹಿಳೆಯರಲ್ಲಿ ಆತ್ಮವಿಶ್ವಾಸ, ನಾಯಕತ್ವ ಗುಣ, ಸ್ವಾವಲಂಬನೆ ಮತ್ತು ಉದ್ಯಮಶೀಲತೆಯ ಮನೋಭಾವವನ್ನು ಬೆಳೆಸಿದೆ. ಸಾರ್ವಜನಿಕ ಸಂಪನ್ಮೂಲವಾಗಿದ್ದ ಕೆರೆಯನ್ನು ಸಮುದಾಯದ ಆರ್ಥಿಕ ಅಭಿವೃದ್ಧಿಗೆ ಬಳಸಿಕೊಂಡಿರುವುದು ಗ್ರಾಮೀಣ ಅಭಿವೃದ್ಧಿಯ ಉತ್ತಮ ಉದಾಹರಣೆಯಾಗಿದೆ.

ಇಂದು ಪ್ರಕೃತಿ ಸಂಜೀವಿನಿ ಮಹಿಳಾ ಸ್ವಸಹಾಯ ಸಂಘದ ಸದಸ್ಯರು ತಮ್ಮದೇ ಆದ ಉದ್ಯಮವನ್ನು ಯಶಸ್ವಿಯಾಗಿ ನಡೆಸುತ್ತಿರುವ ಹೆಮ್ಮೆ ಹೊಂದಿದ್ದು, ಇವರ ಸಾಧನೆ ಜಿಲ್ಲೆಯ ಇತರ ಮಹಿಳೆಯರಿಗೂ ಸ್ಪೂರ್ತಿಯಾಗಿದೆ.

**ಅಧಿಕಾರಿಗಳ ಮಾರ್ಗದರ್ಶನ:** ಜಿಲ್ಲಾ ಮೀನುಗಾರಿಕೆ ಇಲಾಖೆ ಉಪನಿರ್ದೇಶಕ ನಾಗರಾಜ್ ಚಳ್ಳಜ್ಜಿಮನೆ ಹಾಗೂ ಜಿಲ್ಲಾ ಪಂಚಾಯತ್ ವ್ಯವಸ್ಥಾ ಪಕರು (ಕೃಷಿ) ಮಡ್ಡೆಪ್ಪ ಮಲ್ಲಿಮಾರ್, ತಾಲೂಕ ಕಾರ್ಯಕ್ರಮ ವ್ಯವಸ್ಥಾಪಕ ಸಿದ್ದು ಬಿ ಸತ್ಯಣ್ಣವರ ಅವರು ಯೋಜನೆಯ ಪ್ರತಿಯೊಂದು ಹಂತದಲ್ಲೂ ಸ್ವಸಹಾಯ ಸಂಘದ ಸದಸ್ಯರಿಗೆ ಅಗತ್ಯ ಮಾಹಿತಿ, ಮಾರ್ಗದರ್ಶನ ಹಾಗೂ ಪ್ರೋತ್ಸಾಹ ನೀಡಿದರು. ಅವರ ನಿರಂತರ ಸಹಕಾ ರದಿಂದ ಯೋಜನೆ ಯಶಸ್ವಿಯಾಗಿ ಅನುಷ್ಠಾನಗೊಂಡಿದೆ ಎಂದು ಸಂಘದ ಸದಸ್ಯರು ತಿಳಿಸಿದ್ದಾರೆ.

## ಮತ್ಸ್ಯ ಸಂಜೀವಿನಿ ಯೋಜನೆ ಸಾಧನೆ ನಾಗಲೋಟ..

ಗ್ರಾಮೀಣ ಮಹಿಳೆಯರಿಗೆ ಪರ್ಯಾಯ ಜೀವನೋಪಾಯ ಕಲ್ಪಿಸುವ ಉದ್ದೇಶದಿಂದ ಆರಂಭವಾದ ಮತ್ಸ್ಯ ಸಂಜೀವಿನಿ ಯೋಜನೆ ಇಂದು ಗದಗ ಜಿಲ್ಲೆಯಲ್ಲಿ ಮಹಿಳಾ ಸಬಲೀಕರಣದ ಯಶಸ್ವಿ ಮಾದರಿಯಾಗಿ ಹೊರಹೊಮ್ಮಿದ್ದು, ಮಹಿಳೆಯರ ಬದುಕಿನಲ್ಲಿ ಆರ್ಥಿಕ ಸ್ವಾವಲಂಬನೆ ಮತ್ತು ಸಾಮಾಜಿಕ ಗೌರವವನ್ನು ಹೆಚ್ಚಿಸುವಲ್ಲಿ ಮಹತ್ವದ ಪಾತ್ರ ವಹಿಸಿದೆ.

## ಫಲಾನುಭವಿಯ ಸಂತಸ ಮಾತು..

"ಹಿಂದೆ ನಮ್ಮ ಕುಟುಂಬದ ಆದಾಯ ತುಂಬಾ ಕಡಿಮೆಯಾಗಿತ್ತು. ಸಂಜೀವಿನಿ ಯೋಜನೆಯಡಿ ದೊರೆತ ತರಬೇತಿ ಮತ್ತು ಅವಕಾಶದಿಂದ ಮೀನುಗಾರಿಕೆಯನ್ನು ಕಲಿತು ಇಂದು ಸ್ವಂತ ಆದಾಯ ಗಳಿಸುತ್ತಿದ್ದೇವೆ. ನಮ್ಮ ಮಕ್ಕಳ ಶಿಕ್ಷಣ ಹಾಗೂ ಕುಟುಂಬದ ಅಗತ್ಯಗಳನ್ನು ಆತ್ಮವಿಶ್ವಾಸದಿಂದ ಪೂರೈಸುತ್ತಿದ್ದೇವೆ. ನಮ್ಮ ಬದುಕಿನಲ್ಲಿ ಮತ್ಸ್ಯ ಸಂಜೀವಿನಿ ಯೋಜನೆ ಹೊಸ ಬೆಳಕು ತಂದಿದೆ."

**ಶಿವಲೀಲಾ ಹರಿಜನ ಸದಸ್ಯೆ, ಪ್ರಕೃತಿ ಸಂಜೀವಿನಿ ಮಹಿಳಾ ಸ್ವಸಹಾಯ ಸಂಘ, ಸಂಬಾಪುರ**

# KUD ರಸ್ತೆ ಸಂಚಾರ ಸಮಸ್ಯೆಗೆ ಅಂತ್ಯ: ರೈಲ್ವೆ ಅಂಡರ್ ಬ್ರಿಡ್ಜ್ ಲೋಕಾರ್ಪಣೆಗೆ ಸಜ್ಜು



**ಬೆಳಗಾವಿ ವಾರ್ತೆ ಧಾರವಾಡ:** ಧಾರವಾಡ ನಗರದ ಜನತೆ, ವಿದ್ಯಾರ್ಥಿಗಳು ಹಾಗೂ ವಾಹನ ಸವಾರರು ಹಲವು ವರ್ಷಗಳಿಂದ ಎದುರಿಸುತ್ತಿದ್ದ ಸಂಚಾರ ಸಮಸ್ಯೆಗೆ ಶಾಶ್ವತ ಪರಿಹಾರ ದೊರಕುವ ಕ್ಷಣ ಸಮೀಪಿಸಿದೆ. ಕರ್ನಾಟಕ ವಿಶ್ವವಿದ್ಯಾಲಯದ (ಏಗಿಆ) ಸಮೀಪ ನಿರ್ಮಾಣವಾಗಿರುವ ರೈಲ್ವೆ ಅಂಡರ್ ಬ್ರಿಡ್ಜ್ (RUB) ಕಾಮಗಾರಿ ಪೂರ್ಣಗೊಂಡಿದ್ದು, ಶೀಘ್ರದಲ್ಲೇ ಸಾರ್ವಜನಿಕ ಬಳಕೆಗೆ ಲಭ್ಯವಾಗಲಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ವಿಡಿಯೊ ಹಾಗೂ ಮಾಹಿತಿ ಹಂಚಿಕೊಂಡಿರುವ ಅವರು, ಈ ಯೋಜನೆ ಧಾರವಾಡದ ಮೂಲಸೌಕರ್ಯ ಅಭಿವೃದ್ಧಿಯಲ್ಲಿ ಮಹತ್ವದ ಮೈಲಿಗಲ್ಲಾಗಲಿದೆ ಎಂದು ಹೇಳಿದ್ದಾರೆ.

**ಬಹುದಿನಗಳ ಬೇಡಿಕೆಗೆ ಸ್ಪಂದಿಸಿದ ಯೋಜನೆ :** ಧಾರವಾಡದ ಕರ್ನಾಟಕ ವಿಶ್ವವಿದ್ಯಾಲಯ ರಸ್ತೆಯು ನಗರದ ಪ್ರಮುಖ ಸಂಪರ್ಕ ಮಾರ್ಗಗಳಲ್ಲಿ ಒಂದಾಗಿದೆ. ಪ್ರತಿದಿನ ಸಾವಿರಾರು ವಿದ್ಯಾರ್ಥಿಗಳು, ಅಧ್ಯಾಪಕರು, ಸಿಬ್ಬಂದಿ ಹಾಗೂ ಸಾರ್ವಜನಿಕರು ಈ ರಸ್ತೆಯಲ್ಲಿ ಸಂಚರಿಸುತ್ತಾರೆ. ಆದರೆ ರೈಲ್ವೆ ಗೇಟ್ ಸಂಖ್ಯೆ 29ರ ಬಳಿ ರೈಲು ಸಂಚಾರದ ಕಾರಣದಿಂದಾಗಿ ವಾಹನ ದಟ್ಟಣೆ ಮತ್ತು ವಿಳಂಬ ಸಾಮಾನ್ಯವಾಗಿತ್ತು. ಇದರಿಂದ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಸಾಕಷ್ಟು ತೊಂದರೆ ಅನುಭವಿಸುತ್ತಿದ್ದರು.

ಈ ಸಮಸ್ಯೆಯನ್ನು ಗಮನಕ್ಕೆ ತಂದಿದ್ದ ಹುಬ್ಬಳ್ಳಿ–ಧಾರವಾಡ ಪಶ್ಚಿಮ ಕ್ಷೇತ್ರದ ಶಾಸಕ ಅರವಿಂದ ಬೆಲ್ಲದ ಸೇರಿದಂತೆ ಹಲವು ಜನಪ್ರತಿನಿಧಿಗಳು ಮತ್ತು ನಾಗರಿಕರ ಬೇಡಿಕೆಯ ಮೇರೆಗೆ ಯೋಜನೆಗೆ ವೇಗ ನೀಡಲಾಗಿದೆ.

**55 ಕೋಟಿ ವೆಚ್ಚದಲ್ಲಿ ನಿರ್ಮಾಣ :** ರೈಲ್ವೆ ಗೇಟ್ ಸಂಖ್ಯೆ 29ರ ಸಮೀಪ ಸುಮಾರು 55 ಕೋಟಿ ವೆಚ್ಚದಲ್ಲಿ ನಿರ್ಮಾಣಗೊಂಡಿರುವ ಈ ರೈಲ್ವೆ ಅಂಡರ್ ಬ್ರಿಡ್ಜ್ ಒಟ್ಟು 900 ಮೀಟರ್ ಉದ್ದ ಹೊಂದಿದೆ. ಯೋಜನೆಯ ಕಾಮಗಾರಿ ಈಗ ಸಂಪೂರ್ಣ ಮುಕ್ತಾಯಗೊಂಡಿದ್ದು, ಅಂತಿಮ ಹಂತದ ಸಿದ್ಧತೆಗಳು ನಡೆಯುತ್ತಿವೆ. ಲೋಕಾರ್ಪಣೆಯ ನಂತರ ಈ ಮಾರ್ಗ ಸಾರ್ವಜನಿಕ ಸಂಚಾರಕ್ಕೆ ಮುಕ್ತವಾಗಲಿದೆ.

**ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಿಗೆ ಅನುಕೂಲ :** ಕರ್ನಾಟಕ ವಿಶ್ವವಿದ್ಯಾಲಯ ಉತ್ತರ ಕರ್ನಾಟಕದ ಪ್ರಮುಖ ಶೈಕ್ಷಣಿಕ ಕೇಂದ್ರವಾಗಿದೆ. ಪ್ರತಿದಿನ ಸಾವಿರಾರು ವಿದ್ಯಾರ್ಥಿಗಳು ಈ ಪ್ರದೇಶಕ್ಕೆ ಆಗಮಿಸುತ್ತಾರೆ. ರೈಲ್ವೆ ಗೇಟ್ ಮುಚ್ಚುವ ಸಂದರ್ಭಗಳಲ್ಲಿ ಉಂಟಾಗುತ್ತಿದ್ದ ಟ್ರಾಫಿಕ್ ಸಮಸ್ಯೆ, ಸಮಯ ವ್ಯರ್ಥ ಹಾಗೂ ತುರ್ತು ಸಂದರ್ಭಗಳಲ್ಲಿ ಎದುರಾಗುತ್ತಿದ್ದ ಅಡಚಣೆಗಳಿಗೆ ಈ ಅಂಡರ್ ಬ್ರಿಡ್ಜ್ ಪರಿಣಾಮಕಾರಿ ಪರಿಹಾರ ಒದಗಿಸಲಿದೆ. ಇದರಿಂದ ವಾಹನ ಸಂಚಾರ ಹೆಚ್ಚು ಸುಗಮವಾಗುವುದರ ಜೊತೆಗೆ ರಸ್ತೆ ಸುರಕ್ಷತೆಯೂ ಹೆಚ್ಚಾಗುವ ನಿರೀಕ್ಷೆಯಿದೆ.

**ರೈಲ್ವೆ ಇಲಾಖೆಯೊಂದಿಗೆ ನಿರಂತರ ಸಮನ್ವಯ :** ಕೇಂದ್ರ ಸಚಿವ ಪ್ರಹ್ಲಾದ ಜೋಶಿ ಅವರ ಪ್ರಕಾರ, ಈ ಯೋಜನೆಗೆ ಅನುಮೋದನೆ ಹಾಗೂ ಅನುಷ್ಠಾನಕ್ಕಾಗಿ ರೈಲ್ವೆ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ನಿರಂತರ ಸಮನ್ವಯ ಸಾಧಿಸಲಾಗಿತ್ತು. ಸಂಚಾರ ಸಮಸ್ಯೆಯ ಗಂಭೀರತೆಯನ್ನು ಮನಗಂಡು ಯೋಜನೆಯನ್ನು ಆದ್ಯತೆಯ ಆಧಾರದ ಮೇಲೆ ಕೈಗೆತ್ತಿಕೊಳ್ಳಲಾಗಿದ್ದು, ಇದೀಗ ಕಾಮಗಾರಿ ಯಶಸ್ವಿಯಾಗಿ ಪೂರ್ಣಗೊಂಡಿದೆ ಎಂದು ಅವರು ತಿಳಿಸಿದ್ದಾರೆ.

**ಧಾರವಾಡದ ಮೂಲಸೌಕರ್ಯ ಅಭಿವೃದ್ಧಿಗೆ ಮತ್ತೊಂದು ಹೆಜ್ಜೆ :** ಧಾರವಾಡ ನಗರದಲ್ಲಿ ಇತ್ತೀಚಿನ ವರ್ಷಗಳಲ್ಲಿ ರಸ್ತೆ, ರೈಲ್ವೆ ಹಾಗೂ ಇತರ ಮೂಲಸೌಕರ್ಯ ಅಭಿವೃದ್ಧಿ ಯೋಜನೆಗಳಿಗೆ ಹೆಚ್ಚಿನ ಒತ್ತು ನೀಡಲಾಗಿದೆ. ಕರ್ನಾಟಕ ವಿಶ್ವವಿದ್ಯಾಲಯದ ಸಮೀಪದ ಈ ರೈಲ್ವೆ ಅಂಡರ್ ಬ್ರಿಡ್ಜ್ ನಗರಾಭಿವೃದ್ಧಿಗೆ ಹೊಸ ವೇಗ ನೀಡಲಿದ್ದು, ಭವಿಷ್ಯದ ಸಂಚಾರ ಅವಶ್ಯಕತೆಗಳನ್ನು ಪೂರೈಸುವಲ್ಲಿ ಪ್ರಮುಖ ಪಾತ್ರ ವಹಿಸಲಿದೆ ಎಂದು ನಿರೀಕ್ಷಿಸಲಾಗಿದೆ.

ಕೇಂದ್ರ ಸರ್ಕಾರಕ್ಕೆ ಕೃತಜ್ಞತೆ : ಯೋಜನೆ ಯಶಸ್ವಿಯಾಗಿ ಪೂರ್ಣಗೊಳ್ಳಲು ಸಹಕರಿಸಿದ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಹಾಗೂ ಕೇಂದ್ರ ರೈಲ್ವೆ ರಾಜ್ಯ ಸಚಿವ ವಿ ಸೋಮಣ್ಣ ಅವರಿಗೆ ಪ್ರಹ್ಲಾದ ಜೋಶಿ ಧನ್ಯವಾದ ಅರ್ಪಿಸಿದ್ದಾರೆ.

# ಹಾಸನ ರಾಜ್ಯ ಮಟ್ಟದ ಸ್ಕೇಟಿಂಗ್ ಕ್ರೀಡಾಕೂಟ: ಮುದ್ದೇಬಿಹಾಳದ ಬಿಎಎಸ್ ಶಾಲೆಗೆ ಪದಕಗಳ ಮಹಾಪೂರ



**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ತಾಲೂಕಿನ ಹಡಲಗೇರಿ ವ್ಯಾಪ್ತಿಯಲ್ಲಿ ಬರುವ ಬಿಎಎಸ್ ಇಂಟರ್‌ನ್ಯಾಷನಲ್ (ಸಿಬಿಎಸ್‌ಇ) ಶಾಲೆಯ ವಿದ್ಯಾರ್ಥಿಗಳು ಹಾಸನದಲ್ಲಿ ಇತ್ತೀಚಿಗೆ ಜರುಗಿದ ರಾಜ್ಯ ಮಟ್ಟದ ಮುಕ್ತ ಸ್ಕೇಟಿಂಗ್ ಕ್ರೀಡಾಕೂಟದಲ್ಲಿ ಭಾಗವಹಿಸಿ ವಿವಿಧ ವಿಭಾಗಗಳಲ್ಲಿ ಪದಕಗಳನ್ನು ಮುಡಿಗೇರಿಸಿಕೊಳ್ಳುವ ಮೂಲಕ ಶಾಲೆ ಹಾಗೂ ತಾಲೂಕಿಗೆ ಕೀರ್ತಿ ತಂದಿದ್ದಾರೆ. ಹಾಸನ ಜಿಲ್ಲೆಯ ಎಚ್.ಕೆ.ಎಸ್ ಇಂಟರನ್ಯಾಷನಲ್ ಶಾಲೆಯಲ್ಲಿ ಹಮ್ಮಿಕೊಳ್ಳಲಾಗಿದ್ದ 'ಕಿಂಗ್ಸ್ ಸ್ಕೇಟಿಂಗ್ (ಓಪನ್) ಚಾಂಪಿಯನ್ ಶಿಪ್'ನಲ್ಲಿ ಭಾಗವಹಿಸಿದ್ದ ಶಾಲೆಯ ಪ್ರತಿಭೆಗಳು 200 ಮೀಟರ್ ರೇಸ್, ರೋಡ್ ರೇಸ್ ಹಾಗೂ ರಿಲೇ ರೇಸ್ ವಿಭಾಗಗಳಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿ ಪದಕಗಳ ಬೇಟೆಯಾಡಿದ್ದಾರೆ. ಇದೇ ಸಂದರ್ಭದಲ್ಲಿ ವಿಜೇತ ಕ್ರೀಡಾಪಟುಗಳನ್ನು ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿ ಹಾಗೂ ಶಿಕ್ಷಕ ವೃಂದದ ವತಿಯಿಂದ ಸನ್ಮಾನಿಸಿ ಅಭಿನಂದಿಸಲಾಯಿತು.?

ಕ್ರೀಡಾಕೂಟದ ವಿವಿಧ ವಿಭಾಗಗಳಲ್ಲಿ ಶಾಲೆಯ ವಿದ್ಯಾರ್ಥಿಗಳು ಗಮನಾರ್ಹ ಸಾಧನೆ ಮಾಡಿದ್ದಾರೆ. ಸ್ಕೇಟಿಂಗ್ 200 ಮೀಟರ್ ರೇಸ್‌ನಲ್ಲಿ ಶಕುಂತಲಾ ಎಸ್. ಶಾರದಳ್ಳಿ ಪ್ರಥಮ ಸ್ಥಾನ ಹಾಗೂ ರಿಲೇಯಲ್ಲಿ ತೃತೀಯ ಸ್ಥಾನ ಪಡೆದರೆ, ವಿಕ್ರಾಂತ ಶಾರದಳ್ಳಿ ಸ್ಕೇಟಿಂಗ್ ರಿಲೆಯಲ್ಲಿ ಪ್ರಥಮ ಮತ್ತು 200 ಮೀಟರ್ ರೇಸ್‌ನಲ್ಲಿ ದ್ವಿತೀಯ ಸ್ಥಾನ ಗಳಿಸಿದ್ದಾರೆ. ಅಕೀಲ ಎನ್. ಅಸ್ಕಿ ಸ್ಕೇಟಿಂಗ್ ರಿಲೆಯಲ್ಲಿ ದ್ವಿತೀಯ ಹಾಗೂ 200 ಮೀಟರ್ ರೇಸ್‌ನಲ್ಲಿ ತೃತೀಯ ಸ್ಥಾನ, ಆದಿತ್ಯಾ ಎನ್. ಅಸ್ಕಿ ಸ್ಕೇಟಿಂಗ್ ರಿಲೆಯಲ್ಲಿ ದ್ವಿತೀಯ ಹಾಗೂ 200 ಮೀಟರ್ ರೇಸ್‌ನಲ್ಲಿ ತೃತೀಯ ಸ್ಥಾನ ಪಡೆದಿದ್ದಾರೆ. ಸುದೀತಿ ವಿ. ಕೋರಿ ಸ್ಕೇಟಿಂಗ್ ರಿಲೆಯಲ್ಲಿ ಪ್ರಥಮ ಹಾಗೂ 200 ಮೀಟರ್ ರೇಸ್‌ನಲ್ಲಿ ದ್ವಿತೀಯ ಸ್ಥಾನ, ನೀಲಕಂಠ ವಿ. ಕೋರಿ ಸ್ಕೇಟಿಂಗ್ ರಿಲೆಯಲ್ಲಿ ತೃತೀಯ ಹಾಗೂ 200 ಮೀಟರ್ ರೇಸ್‌ನಲ್ಲಿ ತೃತೀಯ ಸ್ಥಾನ ಮತ್ತು ದೀಕ್ಷ ವಿ. ಮಠ ಸ್ಕೇಟಿಂಗ್ ರಿಲೆಯಲ್ಲಿ ಪ್ರಥಮ ಹಾಗೂ 200 ಮೀಟರ್ ರೇಸ್‌ನಲ್ಲಿ ತೃತೀಯ ಸ್ಥಾನ ಪಡೆದು ಶಾಲೆಗೆ ಹೆಮ್ಮೆ ತಂದಿದ್ದಾರೆ.

ಇದೇ ಸಂದರ್ಭದಲ್ಲಿ ಮಾತನಾಡಿದ ಶಿಕ್ಷಣ ಸಂಸ್ಥೆಯ ಪ್ರಾಚಾರ್ಯ ಅಶೋಕ್ ತುಪ್ಪ ಅವರು, ನಮ್ಮ ಶಾಲೆಯ ವಿದ್ಯಾರ್ಥಿಗಳು ರಾಜ್ಯ ಮಟ್ಟದ ಕ್ರೀಡಾಕೂಟದಲ್ಲಿ ಅತ್ಯುತ್ತಮ ಪ್ರದರ್ಶನ ನೀಡಿ ಪದಕಗಳನ್ನು ಗೆದ್ದಿರುವುದು ಹೆಮ್ಮೆಯ ಸಂಗತಿಯಾಗಿದೆ. ಮುಂದಿನ ದಿನಗಳಲ್ಲೂ ಶಾಲೆಯ ಪ್ರತಿಭಾವಂತ ಕ್ರೀಡಾಪಟುಗಳು ಉತ್ತಮ ಕಲಿಕೆಯ ಜೊತೆಗೆ ಕಠಿಣ ಪರಿಶ್ರಮಪಟ್ಟು ಕ್ರೀಡಾಕೂಟಗಳಲ್ಲಿ ಭಾಗವಹಿಸಬೇಕು. ತಮಗೆ ಸಿಕ್ಕ ಪ್ರತಿಯೊಂದು ಅವಕಾಶದಲ್ಲೂ ಸಂಪೂರ್ಣ ಸಾಮರ್ಥ್ಯವನ್ನು ಪ್ರದರ್ಶಿಸಿ ಯಶಸ್ವಿಯಾಗಬೇಕು ಎಂದು ಶುಭಹಾರೈಸಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಮಾರ್ಗದರ್ಶಕರಾದ ಶಿವನಗೌಡ ಬಿರಾದಾರ್, ಸಂಸ್ಥೆಯ ಕಾರ್ಯದರ್ಶಿ ಶ್ರೀಮತಿ ಸುಮಂಗಲ ಬಿರಾದಾರ್, ಆಡಳಿತಾಧಿಕಾರಿ ಪ್ರಭುಗೌಡ ಬಿರಾದಾರ್, ಕೋರ್ಡಿನೇಟರ್ ಸತೀಶ್ ವಾಲಿಕಾರ್, ತರಬೇತಿದಾರ ಶಿವಕುಮಾರ ಶಾರದಳ್ಳಿ ಸೇರಿದಂತೆ ಶಿಕ್ಷಕ ವೃಂದ, ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಸರ್ಕಾರ ಅಸ್ಥಿರಗೊಳಿಸಲು ಸಿದ್ದರಾಮಯ್ಯ ಆಟ ಈಗ ಶುರು

**ಬೆಳಗಾವಿ ವಾರ್ತೆ ಧಾರವಾಡ:** ಸರಕಾರ ಸುಸೂತ್ರವಾಗಿ ನಡೆಯಬಾರದು ಎಂಬ ಉದ್ದೇಶದಿಂದ ಸಿದ್ದರಾಮಯ್ಯ ಈಗಲೇ ತಮ್ಮ ಆಟ ಶುರು ಮಾಡಿಕೊಂಡಿದ್ದಾರೆ ಎಂದು ವಿಧಾನಸಭೆ ವಿಪಕ್ಷದ ಉಪನಾಯಕ ಅರವಿಂದ ಬೆಲ್ಲದ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿ, ಮುಖ್ಯಮಂತ್ರಿ ಬದಲಾವಣೆ ಎಂದಾಗಲೇ ನಾನು ಈ ಮೊದಲೇ ಹೇಳಿದ್ದೆ. ಸದ್ಯ ರಾಮಲಿಂಗಾ ರೆಡ್ಡಿ ರಾಜೀನಾಮೆ ನೀಡಿದ್ದಾರೆ. ಈಗ ಈ ರೀತಿ ಹಿಂದಿನಿಂದ ಅವರು ಆಟ ಶುರು ಮಾಡಿದ್ದಾರೆ ಎಂದರು.

ಇವರಿಗೆ ರಾಜ್ಯದ ಮತ್ತು ಜನತೆಯ ಬಗ್ಗೆ ಕಾಳಜಿ ಇಲ್ಲ. ಸಚಿವರು ತಮಗೆ ಇಷ್ಟವಾದ ಖಾತೆ ಬೇಕು, ಅವರಂತೆ ಕೇಳುವ ಅಧಿಕಾರಿಗಳು ಬೇಕು ಎಂದು ಹೊಡೆದಾಡುತ್ತಿದ್ದಾರೆ. ಈಗಿನ ಸರಕಾರ ಮಾತ್ರ ಇರುವಷ್ಟು ದಿನ ಕಿತ್ತಾಡಿಕೊಂಡು ತಮ್ಮ ಬೊಕ್ಕಸ ತುಂಬಿಕೊಂಡು ಹೋಗುತ್ತಾರೆ ಎಂದರು.

ಮೊದಲಿನಿಂದಲೂ ಪ್ರಿಯಾಂಕ ಖರ್ಗೆ ಆರ್‌ಎಸ್‌ಎಸ್ ವಿರೋಧಿಸುತ್ತಲೇ ಬಂದಿದ್ದಾರೆ. ಈಗ ಅವರಿಗೆ ಗೃಹ ಖಾತೆ ಸಿಕ್ಕಿದೆ. ಅದು ಬಹಳ ಜವಾಬ್ದಾರಿಯುತ ಖಾತೆ. ಅವರು ಅದನ್ನು ಸರಿಯಾಗಿ ನಿಭಾಯಿಸಬೇಕು. ಆರ್‌ಎಸ್‌ಎಸ್ ಒಳ್ಳೆಯ ಕೆಲಸ ಮಾಡುತ್ತಿರುವುದರಿಂದಲೇ ಜನ ಅದನ್ನು ಬೆಂಬಲಿಸಿದ್ದಾರೆ. ಯಾರೋ ಏನೋ ಹೇಳುತ್ತಾರೆ ಎಂದು ಅದನ್ನು ಕಾಮಾಲೆ ಕಣ್ಣಿನಿಂದ ನೋಡಬಾರದು ಎಂದರು.



# ಜಮೀರ್ ಅಹ್ಮದ್‌ಗೆ ಉಪಮುಖ್ಯಮಂತ್ರಿ ಕೊಡಿ, ನಾಗೇಂದ್ರಗೆ ಸಚಿವ ಸ್ಥಾನ ನೀಡಿ; ಡಿಕೆಶಿಗೆ ಬಳ್ಳಾರಿ ಮುಸ್ಲಿಂರ ಆಗ್ರಹ




**ಬೆಳಗಾವಿ ವಾರ್ತೆ ಬಳ್ಳಾರಿ:** ಸಚಿವ ಬಿ.ಜೆಡ್. ಜಮೀರ್ ಅಹ್ಮದ್ ಖಾನ್ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡಬೇಕೆಂದು ಆಗ್ರಹಿಸಿ ಬಳ್ಳಾರಿ ನಗರದ ಕೌಲ್‌ಬಜಾರ್ ಪ್ರದೇಶದ ದಿವಾನೆ ಮಸ್ತಾನ್ ವಲಿ ಬಾಬಾ ದರ್ಗಾದಲ್ಲಿ ಶುಕ್ರವಾರ ಮುಸ್ಲಿಂ ಸಮುದಾಯದ ಮುಖಂಡರು ವಿಶೇಷ ಪ್ರಾರ್ಥನೆ ಸಲ್ಲಿಸಿದರು.

ಶುಕ್ರವಾರದ ನಮಾಜ್ ಬಳಿಕ ದರ್ಗಾಕ್ಕೆ ಚದ್ದರ್ ಸಮರ್ಪಿಸಿ ವಿಶೇಷ ದುಆ ಮಾಡಿದ ಮುಖಂಡರು, ಜಮೀರ್ ಅಹ್ಮದ್ ಖಾನ್ ಅವರು ರಾಜ್ಯದ ಮುಸ್ಲಿಂ ಸಮುದಾಯದ ಪ್ರಭಾವಿ ನಾಯಕರು ಹಾಗೂ ಕಾಂಗ್ರೆಸ್ ಪಕ್ಷದ ಬೆಳವಣಿಗೆಗೆ ಮಹತ್ವದ ಕೊಡುಗೆ ನೀಡಿರುವ ನಾಯಕರಾಗಿದ್ದಾರೆ ಎಂದು ಅಭಿಪ್ರಾಯಪಟ್ಟರು.

ಈ ಸಂದರ್ಭದಲ್ಲಿ ಮಾತನಾಡಿದ ಮುಖಂಡರು, ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬರಲು ಮುಸ್ಲಿಂ ಸಮುದಾಯದ ಪಾತ್ರ ಮಹತ್ವದ್ದಾಗಿದ್ದು, ಚುನಾವಣೆಯ ಪ್ರತಿಯೊಂದು ಹಂತದಲ್ಲೂ ಪಕ್ಷದ ಪರವಾಗಿ ದುಡಿಯುತ್ತಿರುವ ಸಮುದಾಯಕ್ಕೆ ಅಧಿಕಾರ ಹಂಚಿಕೆಯಲ್ಲಿ ಸಮರ್ಪಕ ಪ್ರಾತಿನಿಧ್ಯ ದೊರೆಯಬೇಕು ಎಂದು ಒತ್ತಾಯಿಸಿದರು.

"ಪಕ್ಷದಲ್ಲಿ ಕೆಲವರಿಗೆ ಬೆಣ್ಣೆ, ಕೆಲವರಿಗೆ ಸುಣ್ಣ ಎಂಬ ರೀತಿಯ ರಾಜಕಾರಣ ನಡೆಯಬಾರದು. ಪಕ್ಷಕ್ಕಾಗಿ ನಿರಂತರವಾಗಿ ದುಡಿಯುವ ನಾಯಕರಿಗೆ ಸೂಕ್ತ ಗೌರವ ಸಿಗಬೇಕು. ಜಮೀರ್ ಅಹ್ಮದ್ ಖಾನ್ ಅವರಿಗೆ ಉಪಮುಖ್ಯಮಂತ್ರಿ ಸ್ಥಾನ ನೀಡುವುದು ನ್ಯಾಯಸಮ್ಮತ ಬೇಡಿಕೆಯಾಗಿದೆ" ಎಂದು ಅವರು ಹೇಳಿದರು.

ಇದೇ ವೇಳೆ ಕೆಲ ಮುಖಂಡರು ಕಾಂಗ್ರೆಸ್ ಹೈಕಮಾಂಡ್‌ಗೆ ಸಂದೇಶ ರವಾನಿಸಿ, ಸಮುದಾಯದ ಭಾವನೆಗಳಿಗೆ ಗೌರವ ನೀಡಿ ಶೀಘ್ರವೇ ಸೂಕ್ತ ನಿರ್ಧಾರ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ದರ್ಗಾ ಆವರಣದಲ್ಲಿ ನಡೆದ ಪ್ರಾರ್ಥನೆ ವೇಳೆ ಜಮೀರ್ ಅಹ್ಮದ್ ಖಾನ್ ಅವರಿಗೆ ಉನ್ನತ ಹುದ್ದೆ ಸಿಗಲೆಂದು ವಿಶೇಷ ದುಆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಅಸ್ಲಾಂ ಬಾಯ್, ಸೈಫುಲ್ಲಾ, ವಾಹಿದ್, ಪಿಂಜರ್ ನೂರ್, ಜಾಂಡ ಜಿಲಾನ್, ಮೊಷಿನ್, ಕಲೀಮ್, ಮನ್ಸೂರ್, ಮುನೀರ್, ಸೀನಾ, ಶಿವಾಜಿ, ಬಟ್ಟಿ ಉಮೇಶ್ ಸಾದಿಕ್ ಸೇರಿದಂತೆ ಮುಸ್ಲಿಂ ಸಮುದಾಯದ ಮುಖಂಡರು, ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಹಲವರು ಉಪಸ್ಥಿತರಿದ್ದರು.

# ಬಳ್ಳಾರಿಯಲ್ಲಿ ಭೀಕರ ರಸ್ತೆ ಅಪಘಾತ: ಲಾರಿ ಡಿಕ್ಕಿಗೆ ಯುವಕ ಸ್ಥಳದಲ್ಲೇ ಸಾವು

**ಬೆಳಗಾವಿ ವಾರ್ತೆ ಬಳ್ಳಾರಿ:** ನಗರದ ಮಾತಿ ಸರ್ಕಲ್ ಸಮೀಪದ ಬಸವೇಶ್ವರ ಪುತ್ಥಳಿ ಎದುರು ಶುಕ್ರವಾರ ಬೆಳಿಗ್ಗೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಬೈಕ್ ಸವಾರನೊಬ್ಬ ಸ್ಥಳದಲ್ಲೇ ಮೃತಪಟ್ಟಿರುವ ದುರ್ಘಟನೆ ನಡೆದಿದೆ.

ಮೃತರನ್ನು ಜೋಳದರಾಶಿ ಗ್ರಾಮದ ನಿವಾಸಿ ವೀರೇಶ್ (28) ಎಂದು ಗುರುತಿಸಲಾಗಿದೆ. ಅವರು ಬೈಕ್‌ನಲ್ಲಿ ಸಂಚರಿಸುತ್ತಿದ್ದ ವೇಳೆ ಅಉ12ಃಈ9703 ಸಂಖ್ಯೆಯ ಲಾರಿಯೊಂದು ಡಿಕ್ಕಿ ಹೊಡೆದ ಪರಿಣಾಮ ಗಂಭೀರ ಗಾಯಗೊಂಡು ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎಂದು ತಿಳಿದುಬಂದಿದೆ.

ಅಪಘಾತ ಸಂಭವಿಸಿದ ತಕ್ಷಣ ಲಾರಿ ಚಾಲಕ ವಾಹನ ಸಮೇತ ಸ್ಥಳದಿಂದ ಪರಾರಿಯಾಗಿದ್ದು, ಮಾಹಿತಿ ಪಡೆದ ಸಂಚಾರ ಪೊಲೀಸರು ತಕ್ಷಣ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಬಳಿಕ ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಬಳ್ಳಾರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ (ಬಿಮ್ಸ್) ಆಸ್ಪತ್ರೆಗೆ ರವಾನಿಸಲಾಯಿತು.

ಘಟನೆಯ ಸುದ್ದಿ ತಿಳಿಯುತ್ತಿದ್ದಂತೆ ಮೃತನ ಕುಟುಂಬಸ್ಥರು ಹಾಗೂ ಗ್ರಾಮಸ್ಥರು ಸ್ಥಳಕ್ಕೆ ಧಾವಿಸಿ ದುಃಖ ವ್ಯಕ್ತಪಡಿಸಿದರು. ಕೆಲಕಾಲ ಅಪಘಾತ ನಡೆದ ಪ್ರದೇಶದಲ್ಲಿ ಆತಂಕದ ವಾತಾವರಣ ನಿರ್ಮಾಣವಾಗಿತ್ತು.

ಈ ಕುರಿತು ಪ್ರತಿಕ್ರಿಯಿಸಿದ ಸಂಚಾರ ಪೊಲೀಸ್ ಇನ್ಸ್ಪೆಕ್ಟರ್ ರುದ್ರಪ್ಪ, ನಗರದಲ್ಲಿ ಹೆಲ್ಮೆಟ್ ಧಾರಣೆ ಕಡ್ಡಾಯವಾಗಿದ್ದು, ವಾಹನ ಸವಾರರು ಸುರಕ್ಷತಾ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಮನವಿ ಮಾಡಿದರು. ಮೃತ ಬೈಕ್ ಸವಾರ ಹೆಲ್ಮೆಟ್ ಧರಿಸಿರಲಿಲ್ಲ ಎಂಬ ಮಾಹಿತಿ ಲಭ್ಯವಾಗಿದ್ದು, ರಸ್ತೆ ಸುರಕ್ಷತೆಯ ಬಗ್ಗೆ ಸಾರ್ವಜನಿಕರು ಹೆಚ್ಚಿನ ಜಾಗೃತಿ ವಹಿಸಬೇಕಿದೆ ಎಂದು ಹೇಳಿದರು.

ಘಟನೆ ಸಂಬಂಧ ಸಂಚಾರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪರಾರಿಯಾಗಿರುವ ಲಾರಿ ಚಾಲಕನ ಪತ್ತೆಗೆ ಪೊಲೀಸರು ಬಲೆ ಬೀಸಿದ್ದಾರೆ. ರಸ್ತೆ ಸುರಕ್ಷತಾ ನಿಯಮಗಳ ಪಾಲನೆಯ ಮಹತ್ವವನ್ನು ಈ ದುರ್ಘಟನೆ ಮತ್ತೊಮ್ಮೆ ನೆನಪಿಸಿದೆ.

# ವಿಶ್ವ ಪರಿಸರ ದಿನದ ಅಂಗವಾಗಿ ಸಸಿ ನೆಡುವಿಕೆ ಪ್ರಕೃತಿ ಉಳಿಸಿ, ಭವಿಷ್ಯ ಬೆಳೆಸಿ: ಪ್ರಹ್ಲಾದ್ ರೆಡ್ಡಿ

**ಬೆಳಗಾವಿ ವಾರ್ತೆ ಬಳ್ಳಾರಿ:** ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಬಳ್ಳಾರಿ ಜಿಲ್ಲೆಯ ಶಿಡಿಗಿನಮೊಳ ಗ್ರಾಮದ ಸಮೀಪ ಇರುವ ಜಾನಕಿ ಕಾರ್ಪೊ ಲಿಮಿಟೆಡ್ ವತಿಯಿಂದ ಸಸಿ ನೆಡುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಕಾರ್ಖಾನೆಯ ಆಡಳಿತಾಧಿಕಾರಿ ಅನ್ವರ್ ಬಾಷಾ ಹಾಗೂ ವಿವಿಧ ವಿಭಾಗಗಳ ಅಧಿಕಾರಿಗಳು ಸಸಿ ನೆಡುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಕಾರ್ಮಿಕರಿಗೆ ಪರಿಸರ ಸಂರಕ್ಷಣೆ ಕುರಿತು ಜಾಗೃತಿ ಮೂಡಿಸುವ ಸಂದೇಶಗಳನ್ನು ಹಂಚಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಮಾತನಾಡಿದ ಮಾಜಿ ಅರೆಸೈನಿಕ, ದೇಶ ಸೇವಾ ರತ್ನ ಹಾಗೂ ಕರ್ನಾಟಕ ಸಾಧಕ ರತ್ನ ಪ್ರಶಸ್ತಿ ಪುರಸ್ಕೃತ ಬಿ.ಎನ್. ಪ್ರಹ್ಲಾದ ರೆಡ್ಡಿ ಅವರು, ಪ್ರಕೃತಿಯನ್ನು ಪ್ರೋತ್ಸಾಹಿಸುವುದು ಮತ್ತು ಸಂರಕ್ಷಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದು ಹೇಳಿದರು.

"ಇಂದು ಒಂದು ಗಿಡವನ್ನು ನೆಟ್ಟು ಹಸಿರನ್ನು ಬೆಳೆಸೋಣ. ಪ್ರಕೃತಿಯನ್ನು ಕಾಪಾಡಿದರೆ ಅದು ನಮ್ಮನ್ನು ಕಾಪಾಡುತ್ತದೆ. ಹಸಿರು ಭೂಮಿ ಆರೋಗ್ಯಕರ ಜೀವನಕ್ಕೆ ಮೂಲವಾಗಿದೆ" ಎಂದು ತಿಳಿಸಿದರು.

ಸಸಿಗಳನ್ನು ನೆಟ್ಟ ನಂತರ ಅವುಗಳನ್ನು ಮಗುವಿನಂತೆ ಆರೈಕೆ ಮಾಡಬೇಕು. ಮನುಷ್ಯನಿಗೆ ನೀರು ಮತ್ತು ಗಾಳಿ ಎಷ್ಟು ಮುಖ್ಯವೋ, ಸಸಿಗಳ ಬೆಳವಣಿಗೆಗೆ ನೀರು ಹಾಗೂ ಬೆಳಕು ಅಷ್ಟೇ ಮುಖ್ಯ ಎಂದು ಅವರು ಹೇಳಿದರು. ಪ್ರತಿಯೊಬ್ಬರೂ ತಮ್ಮ ಮನೆ, ಬೀದಿ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಸ್ನೇಹಿತರೊಂದಿಗೆ ಸೇರಿ ಸಸಿ ನೆಡುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದು ಕರೆ ನೀಡಿದರು.



ಈ ಸಂದರ್ಭದಲ್ಲಿ ಮಾಜಿ ಸೈನಿಕ ಹಾಗೂ ಸುರಕ್ಷತಾ ವಿಭಾಗದ ಮುಖ್ಯಸ್ಥ ಎಂ.ಎಸ್. ರಾವ್, ವೀರೇಶ್ ಬಿ. ಬಲ್ಲಾ, ಸುರಕ್ಷತಾ ಅಧಿಕಾರಿ ನಾಗಶೇಖರ್, ಕಾಶಿಂ, ಜಡೆಸ್ವಾಮಿ ಹಾಗೂ ಕಚೇರಿ ಅಧಿಕಾರಿಗಳಾದ ಶರಣಗೌಡ, ರಾಜಕುಮಾರ, ಮಲ್ಲಿಕಾರ್ಜುನ, ಶಾಮ್, ಈರಿಸ್ವಾಮಿ ಸೇರಿದಂತೆ ಕಾರ್ಖಾನೆಯ ಕಾರ್ಮಿಕರು ಮತ್ತು ಸಿಬ್ಬಂದಿ ಉಪಸ್ಥಿತರಿದ್ದರು.

# ಅಂತರಾಷ್ಟ್ರೀಯ ಮಟ್ಟದ ಸಾಂಸ್ಕೃತಿಕ ಉತ್ಸವ–ಕಾರ್ಯಕ್ರಮಗಳಿಗೆ ಕಲಾತಂಡಗಳ ಹಾಗೂ ಕಲಾವಿದರ ನೋಂದಣಿ ಪ್ರಾರಂಭ

**ಬೆಳಗಾವಿ ವಾರ್ತೆ ಧಾರವಾಡ:** ಭಾರತೀಯ ಸಾಂಸ್ಕೃತಿಕ ಸಂಬಂಧಗಳ ಪರಿಷತ್ ಹಾಗೂ ಕರ್ನಾಟಕ ಸರ್ಕಾರದ ನಡುವೆ ಸಂಸ್ಕೃತಿ, ಕಲೆ, ಶಿಕ್ಷಣಕ್ಕೆ ಸಂಬಂಧಿಸಿದಂತೆ ಒಡಂಬಡಿಕೆಯನ್ನು ಮಾಡಿಕೊಳ್ಳಲಾಗಿದೆ.

ಐಸಿಸಿಆರ್ ಸಂಸ್ಥೆಯ ವತಿಯಿಂದ ರಾಜ್ಯ ಸರ್ಕಾರದ ಸಾಂಸ್ಕೃತಿಕ ಕಲಾತಂಡಗಳು, ಅಂತರಾಷ್ಟ್ರೀಯ ಮಟ್ಟದಲ್ಲಿ ನಡೆಯುವ ವಿವಿಧ ಸಾಂಸ್ಕೃತಿಕ ಉತ್ಸವ ಹಾಗೂ ಕಾರ್ಯಕ್ರಮಗಳಿಗೆ ಕಳುಹಿಸಿಕೊಡುವ ಮೂಲಕ ಕಲಾತಂಡಗಳು ಹಾಗೂ ಕಲಾವಿದರನ್ನು ನೋಂದಣಿ (Empanel) ಎಂಪ್ಯಾನಲ್ ಮಾಡುವುದರೊಂದಿಗೆ ಅವರ ಪ್ರತಿಭೆಯನ್ನು ಹೆಚ್ಚು ಪ್ರಚಾರಪಡಿಸಲು ಇದರಿಂದ ಅನುಕೂಲವಾಗಲಿದೆ.

ಆದ್ದರಿಂದ ರಾಜ್ಯದಲ್ಲಿನ ಕಲಾವಿದರು ಹಾಗೂ ಕಲಾತಂಡಗಳು ನಿಗದಿತ ನಮೂನೆಯನ್ನು ಭರ್ತಿ ಮಾಡಿ, ಅಗತ್ಯ ದಾಖಲೆಗಳೊಂದಿಗೆ ಆಯಾ ಜಿಲ್ಲೆಗಳ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರ ಕಚೇರಿಗೆ ಜೂನ್ 12, 2026 ರೊಳಗೆ ಸಲ್ಲಿಸಿ, ನೋಂದಾಯಿಸಿಕೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವೆಬ್‌ಸೈಟ್ www.kannadasiri.karnataka.gov.in ನಲ್ಲಿ ಪಡೆಯಬಹುದು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗಿಡ ಮರಗಳನ್ನು ಬೆಳೆಸಿ ಪರಿಸರವನ್ನು ರಕ್ಷಿಸಿ : ಅಣ್ಣಾಸಾಬ ತೆಲಸಂಗ



**ಬೆಳಗಾವಿ ವಾರ್ತೆ ಅಥಣಿ:** ಭೂಮಿಯ ಮೇಲೆ ಬದುಕುವ ಪ್ರತಿಯೊಂದು ಜೀವಿಗೆ ಬೆಳಕು, ನೀರು, ಗಾಳಿ, ಆಹಾರ ಮುಖ್ಯವಾಗಿವೆ. ಎಲ್ಲ ಪ್ರಾಣಿಗಳಲ್ಲಿ ಬುದ್ಧಿವಂತನಾಗಿರುವ ಮನುಷ್ಯ ತನ್ನ ಆಮಿಷಕ್ಕೆ ಅರಣ್ಯ ಸಂಪತ್ತನ್ನು ನಾಶ ಮಾಡುತ್ತಿದ್ದಾನೆ. ಇದರಿಂದ ಮುಂದಿನ ದಿನಗಳಲ್ಲಿ ಪರಿಸರದಲ್ಲಿ ಅಸಮತೋಲನ ಉಂಟಾಗಲಿದ್ದು, ಮುಂದೊಂದು ದಿನ ಆಕ್ಸಿಜನ್ ( ಶುದ್ಧ ಗಾಳಿ ) ಕೊರತೆ ಆಗಬಹುದು, ಆದ್ದರಿಂದ ನಾವೆಲ್ಲ ಎಚ್ಚೆತ್ತುಕೊಂಡು ಈಗಿನಿಂದಲೇ ಗಿಡಮರಗಳನ್ನು ನೆಟ್ಟು ಸಂರಕ್ಷಣೆ ಮಾಡುವುದು ಅಗತ್ಯ ಎಂದು ಕರವೇ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಅಣ್ಣಾಸಾಬ ತೆಲಸಂಗ ಹೇಳಿದರು.

ಅವರು ಪಟ್ಟಣದ ಸರ್ಕಾರಿ ಕನ್ನಡ ಹಿರಿಯ ಪ್ರಾಥಮಿಕ ಶಾಲೆ ನಂ. 01 ರಲ್ಲಿ ವಿಶ್ವ ಪರಿಸರ ದಿನಾಚರಣೆಯ ಅಂಗವಾಗಿ ಶಾಲೆಯ ಆವರಣದಲ್ಲಿ ಗಿಡ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಭೂಮಿ ಇದ್ದಷ್ಟೇ ಇದ್ದು, ದಿನದಿಂದ ದಿನಕ್ಕೆ ಜನಸಂಖ್ಯೆ ಹೆಚ್ಚಾಗುತ್ತಿದೆ. ನಮ್ಮ ಸುತ್ತಮುತ್ತಲಿನ ಪರಿಸರ ಮತ್ತು ಅರಣ್ಯಗಳನ್ನು ನಾಶ ಮಾಡಿ ಅನೇಕ ಆರೋಗ್ಯ ಸಮಸ್ಯೆಗಳನ್ನು ಎದುರಿಸುತ್ತಿದ್ದೇವೆ. ಮುಂಬರುವ ದಿನಗಳಲ್ಲಿ ಹವಾಮಾನದ ವೈಪರಿತದಿಂದ ಮನುಷ್ಯ ಸೇರಿದಂತೆ ಪ್ರಾಣಿ ಸಂಕುಲಕ್ಕೆ ಸಂಕಷ್ಟ ಎದುರಾಗಲಿದೆ. ಆದ್ದರಿಂದ ಪ್ರತಿಯೊಬ್ಬರೂ ಗಿಡಮರಗಳನ್ನು ಬೆಳೆಸಬೇಕು. ಶಾಲಾ ಹಂತದಲ್ಲಿ ಮಕ್ಕಳಿಗೆ ಪರಿಸರ ಸಂರಕ್ಷಣೆಯ ಮಹತ್ವವನ್ನ ತಿಳಿಸುವುದು ಇಂದಿನ ಅಗತ್ಯವಾಗಿದೆ ಎಂದರು.

ಶಾಲಾ ಮಕ್ಕಳಿಗೆ ಸಸಿಗಳನ್ನು ವಿತರಿಸಿದ

ಅಥಣಿ ತಾಲೂಕಾ ನಿವೃತ್ತ ನೌಕರರ ಸಂಘದ ಅಧ್ಯಕ್ಷ ಎಸ್ ಎಸ್ ಹೂಟಿ ಮಾತನಾಡಿ ಪರಿಸರ ದಿನಾಚರಣೆ ಕೇವಲ ಫೊ?ಟೋ ಪ್ರದರ್ಶನ ಮತ್ತು ಅಭಿಯಾನಕ್ಕೆ ಸೀಮಿತವಾಗಬಾರದು. ಶಾಲಾ ಹಂತದಲ್ಲಿ ಮಕ್ಕಳಿಗೆ ಗಿಡಮರಗಳು ಮತ್ತು ಅರಣ್ಯದ ಮಹತ್ವವನ್ನ ತಿಳಿಸುವುದರ ಜೊತೆಗೆ ಗಿಡಗಳನ್ನನು ಬೆಳೆಸಲು ಪ್ರೊತ್ಸಾಹಿಸಬೇಕ. ಶಾಲೆಯ ಆವರಣದಲ್ಲಿ ಮಕ್ಕಳಿಗೆ ಮತ್ತು ವರ್ಗ ಶಿಕ್ಷಕರಿಗೆ ವರ್ಷಪೂರ್ತಿ ಗಿಡಗಳ ಪೋಷಣೆ ಮಾಡಲು ದತ್ತು ನೀಡಬೇಕು ಎಂದು ಸಲಹೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಶಾಲೆಯ ಮುಖ್ಯೋಪಾಧ್ಯಾಯ ಎಸ್ ಬಿ ಕಟಗೇರಿ ಮಾತನಾಡಿ ಪರಿಸರ ದಿನಾಚರಣೆಯ ಮಹತ್ವವನ್ನ ತಿಳಿಸಿದರು. ಈ ಸಂದರ್ಭದಲ್ಲಿ ಕೆ ಬಿ ಶಿರಗೂರ, ವೈ ಎಂ ನಡುವಿನಮನಿ, ಎಸ್ ಬಿ ಕೆಮ್ಮನ್ನವರ, ಬಿ ಎಂ ಅನಂತಪುರ, ಪಿ ಆರ್ ಬಸಗೌಡರ, ಎ ಪಿ ಬಡಕಂಬಿ ಸೇರಿದಂತೆ ಇನ್ನೇತರರು ಉಪಸ್ಥಿತರಿದ್ದರು.



**ಬೆಳಗಾವಿ ವಾರ್ತೆ ಗೋಕಾಕ:** ತಾಲೂಕು ಕಾನೂನು ಸೇವೆಗಳ ಸಮಿತಿ, ನ್ಯಾಯವಾದಿಗಳ ಸಂಘ, ವಲಯ ಅರಣ್ಯ ಇಲಾಖೆ ಹಾಗೂ ಶ್ರೀ ಚನ್ನಬಸವೇಶ್ವರ ಶಿಕ್ಷಣ ಸಂಸ್ಥೆ ಇವುಗಳ ಸಂಯುಕ್ತ ಆಶ್ರಯದಲ್ಲಿ ವಿಶ್ವ ಪರಿಸರ ದಿನಾಚರಣೆ ನಿಮಿತ್ಯ ಸಸಿ ನೆಡುವ ಕಾರ್ಯಕ್ರಮಕ್ಕೆ ಇಲ್ಲಿಯ ಸಿವಿಲ್ ಹಾಗೂ ಜೆಎಮ್‌ಎಫ್‌ಸಿ ನ್ಯಾಯಾಧೀಶರು ಮತ್ತು ತಾಲೂಕು ಕಾನೂನು ಸೇವಾ ಸಮಿತಿ ಕಾರ್ಯದರ್ಶಿ ಸಂಪತಕುಮಾರ ಬಿ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಶೂನ್ಯ ಸಂಪಾದನ ಮಠದ ಪೀಠಾಧಿಪತಿ ಶ್ರೀ ಮುರುಘರಾಜೇಂದ್ರ ಮಹಾಸ್ವಾಮಿಗಳು, ನ್ಯಾಯವಾದಿಗಳ ಸಂಘದ ಅಧ್ಯಕ್ಷ ಜಿ ಬಿ ಪಾಟೀಲ, ಮಹಿಳಾ ಪ್ರತಿನಿಧಿ ವಿ ಜಿ ಸಿದ್ದಾಪೂರಮಠ, ಸಹಕಾರ್ಯದರ್ಶಿ ಎಸ್ ಬಿ ವಡೇರಟ್ಟಿ, ಖಜಾಂಚಿ ಜೆ ಸಿ ಖಂಡ್ರಟ್ಟಿ, ಡಿಎಫ್‌ಓ ಪ್ರಭಾಕರ ಪ್ರೀಯದರ್ಶಿ, ಎಸಿಎಫ್ ವಾಸೀಂರಾಜ ತೆನಗಿ, ವಲಯ ಅರಣ್ಯಾಧಿಕಾರಿ ಆನಂದ ಹೆಗಡೆ, ಐಡಿಎಫ್‌ಸಿ ವ್ಯವಸ್ಥಾಪಕ ಶಿವಾನಂದ ತಿರಕನ್ನವರ, ಸಂಸ್ಥೆಯ ಆಡಳಿತಾಧಿಕಾರಿ ಅಡವೀಶ ಗವಿಮಠ, ಮುಖ್ಯೋಪಾಧ್ಯಾಯ ಎಸ್ ಕೆ ಮಠದ, ಎಸ್ ಎಸ್ ಕೊಳವಿ ಇದ್ದರು.

# ವೃತ್ತಿಯಲ್ಲಿದ್ದವರು ನಿವೃತ್ತಿ ಎಂಬುವುದು ಅನಿವಾರ್ಯವಾದದ್ದು ಸೇವಾವಧಿಯಲ್ಲಿ ಪ್ರಾಮಾಣಿಕವಾಗಿ ಕೆಲಸ ಮಾಡುವುದು ಮುಖ್ಯ

**ಬೆಳಗಾವಿ ವಾರ್ತೆ ಚನ್ನಮ್ಮನ ಕಿತ್ತೂರ:** ಸಮಾಜಕ್ಕೆ ಜ್ಞಾನ ನೀಡುವ ಶಿಕ್ಷಕರ ವೃತ್ತಿ ಅತ್ಯಂತ ಗೌರವಯುತ ಶ್ರೇಷ್ಠ ವೃತ್ತಿಯಾಗಿದೆ. ವೃತ್ತಿಯಲ್ಲಿದ್ದವರು ನಿವೃತ್ತಿ ಎಂಬುವುದು ಅನಿವಾರ್ಯವಾದದ್ದು ಸೇವಾವದಿಯಲ್ಲಿ ಪ್ರಾಮಾಣಿಕವಾಗಿ ಕೆಲಸ ಮಾಡುವುದು ಮುಖ್ಯವೆಂದು ಕ್ಷೇತ್ರ ಶಿಕ್ಷಣಾಧಿಕಾರಿ ಚನ್ನಬಸಪ್ಪ ತುಬಾಕಿ ಹೇಳಿದರು.

ತಾಲೂಕಿನ ದೇವಗಾಂವ ಗ್ರಾಮದ ಸರ್ಕಾರಿ ಹಿರಿಯ ಮಾದರಿ ಪ್ರಾಥಮಿಕ ಕನ್ನಡ ಶಾಲೆಯಲ್ಲಿ ಮುಖ್ಯೋಪಾಧ್ಯಾಯ ಸದಾಶಿವ ಲಕ್ಷಣ ಪೋಳ ಹಾಗೂ ಸಹ ಶಿಕ್ಷಕಿ ಸ್ವರ್ಣಲತಾ .ಸಂ. ಹಾಲಗೇರಿ ಇವರ ಸೇವಾ ನಿವೃತ್ತಿ ಅಭಿನಂದನಾ ಸಮಾರಂಭ ಕಾರ್ಯಕ್ರಮದಲ್ಲಿ ಮಾತನಾಡಿದರು. "ನದಿ ತನ್ನ ಉಗಮ ಸ್ಥಾನದಿಂದ ಹರಿದು ಸಾಗರವನ್ನು ಸೇರುವಂತೆ ಪ್ರತಿಯೊಬ್ಬ ಸರ್ಕಾರಿ ನೌಕರನಿಗೂ ನಿವೃತ್ತಿ ಸಹಜ. ಶಿಕ್ಷಣ ಕ್ಷೇತ್ರದಲ್ಲಿ ಅಮೂಲ್ಯ ಸೇವೆ ಸಲ್ಲಿಸಿ ಇಂದು ಈ ಇಬ್ಬರು ಶಿಕ್ಷಕರು ಈ ಶಾಲೆಯ ಏಳಿಗೆಗೆ ತಮ್ಮ ಶಕ್ತಿ ಮೀರಿ ಶ್ರಮಿಸಿದ್ದಾರೆ. ತಮ್ಮ ಸುಧೀರ್ಘ ಸೇವೆಯನ್ನು ಯಶಸ್ವಿಗೊಳಿಸಿದ್ದಾರೆ. ವಿದ್ಯಾರ್ಥಿಗಳಿಗೆ ರಚನಾತ್ಮಕವಾಗಿ ಶಿಕ್ಷಣ ಕಲಿಸುವ ಮೂಲಕ ಈ ಇಬ್ಬರು ಶಿಕ್ಷಕರು ಮಕ್ಕಳ ಹಾಗೂ ಸಾರ್ವಜನಿಕರ, ಶಿಕ್ಷಣ ಇಲಾಖೆಗೆ ಮೆಚ್ಚುಗೆ ಪಾತ್ರರಾಗಿದ್ದಾರೆ. ಇವರ ನಿವೃತ್ತಿ ಮುಂದಿನ ಜೀವನ ಉತ್ತಮವಾಗಿ ಸಾಗಲಿ ಎಂದು ಆಶಿಸಿದರು.

ತಮ್ಮ ಸೇವಾ ನಿವೃತ್ತಿ ಕುರಿತು ಪೋಳ ಮತ್ತು ಹಾಲಗೇರಿ ಅವರು ತಮ್ಮ ಅನಿಸಿಕೆ ಹಂಚಿಕೊಂಡರು. ತಮ್ಮ ಸುಧೀರ್ಘ ಶಿಕ್ಷಣ ಸೇವೇ ಸಲ್ಲಿಸಿ ಹಲವಾರು ವಿದ್ಯಾರ್ಥಿಗಳಿಗೆ ಅಕ್ಷರಜ್ಞಾನ ಎರೆದು ದೇಶಕ್ಕೆ ಕೊಡುಗೆ ನೀಡಿ ನಿವೃತ್ತಿಯಾದ ಸದಾಶಿವ ದಂಪತಿಗಳು ಹಾಗೂ ಸುರ್ಣಲತಾ ಹಾಲಗೇರಿ ಇವರನ್ನು ಶಿಕ್ಷಕರು, ಸಾರ್ವಜನಿಕರು ಸೇರಿದಂತೆ ಇನ್ನಿತರರು



ಸತ್ಕರಿಸಿ ಅದ್ದೂರಿಯಿಂದ ಬಿಳ್ಕೊಟ್ಟರು.

ಶಿಕ್ಷಣ ಸಂಯೋಜಕರಾದ ಎಸ್.ಎಂ.ಶಹಾಪೂರಮಠ, ಬಿ.ಆರ್ ಪಿ. ಎಂ.ವಾಯ್. ಕಡಕೋಳ, ಸಿಆರ್ಪಿ ಸಂಜೀವ ಹುಬ್ಬಳ್ಳಿ, ರಮೇಶ ಉಗರಖೋಡ, ಪತ್ರಕರ್ತ ಕಲ್ಲಪ್ಪ ದೇಗಲೋಳ್ಳಿ(ಅಗಸಿಮನಿ) ಮಾತನಾಡಿದರು. ಎಸ್ಡಿಎಂಸಿ ಅಧ್ಯಕ್ಷ ಮಲ್ಲಿಕಾರ್ಜುನ ಇಟ್ನಾಳ ಸಭೆ ಅಧ್ಯಕ್ಷತೆವಹಿಸಿದ್ದರು. ದೈಹಿಕ ಶಿಕ್ಷಕ ನಾಗಪ್ಪ ಕೇರವಾಡ, ಗ್ರಾಪಂ ಸದಸ್ಯರು, ವಿವೇಕ ದುಗ್ಗಾಣಿ, ಅದೃಶ್ಯ ಪತ್ತಾರ, ವಿಠ್ಠಲ್ ಸಬ್ಬನೀಸ್, ಪ್ರಕಾಶ ಕಡತಾಳ, ಲಕ್ಷ್ಮಿ ?? ಗಂದಿಗವಾಡ, ಎಸ್ಡಿಎಂಸಿ ಮತ್ತು ಗ್ರಾಪಂ ಸರ್ವಸದಸ್ಯರು, ಸಹ ಶಿಕ್ಷಕ-ಶಿಕ್ಷಕಿಯರು, ಗ್ರಾಮಸ್ಥರು, ಮಕ್ಕಳು, ಶಿಕ್ಷಣ ಪ್ರೇಮಿಗಳು, ಇನ್ನಿತರರಿದ್ದರು. ಶಿಕ್ಷಕಿ ತನುಜಾ ತೆಂಬದಮನಿ, ಮಂಜುಳಾ ಬಾರ್ಕಿ ನಿರೂಪಿಸಿದರು, ಶಿಕ್ಷಕಿ ಚವ್ಹಾಣ ಸ್ವಾಗತಿಸಿದರು. ಶಿಕ್ಷಕ ರಾಘವೇಂದ್ರ ಹೊಂಬಳ, ವಂದಿಸಿದರು.



**ಬೆಳಗಾವಿ ವಾರ್ತೆ ಗೋಕಾಕ:** ಜಯ ಕರ್ನಾಟಕ ಜನಪರ ವೇದಿಕೆ ತಾಲೂಕು ಘಟಕದಿಂದ ವಿಶ್ವ ಪರಿಸರ ದಿನ ಆಚರಿಸಲಾಯಿತು.

ತಾಲೂಕಾಧ್ಯಕ್ಷ ಅಜೀಜ ಮೋಕಾಶಿ, ನಗರಾಧ್ಯಕ್ಷ ಯಾಸೀನ ಮುಲ್ಲಾ, ಕೃಷ್ಣಾ ಮಾವರಕರ, ಸಮೀವುಲ್ಲಾ ಜಮಾದಾರ, ರಶೀದ ಬಾರಗೀರ, ರವಿ ಕಂಬಿಮಠ, ಕಿಶೋರ ತೋಟಗಟ್ಟಿ, ಹನೀಫ ಅಂಡಗಿ ಇದ್ದರು.

# ಪರಿಸರ ಸಂರಕ್ಷಣೆ ಪ್ರತಿಯೊಬ್ಬರ ಹೊಣೆ : ಜಿಲ್ಲಾ ನ್ಯಾಯಾದೀಶರು ನಾಗವೇಣಿ



**ಬೆಳಗಾವಿ ವಾರ್ತೆ ಗದಗ:** ಪರಿಸರ ಸಂರಕ್ಷಣೆ ಎಲ್ಲರ ಜವಾಬ್ದಾರಿ ಎಂದು ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಶ್ರೀಮತಿ.ನಾಗವೇಣಿ ಹೇಳಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ವಕೀಲರ ಸಂಘ, ಅರಣ್ಯ ಇಲಾಖೆ ಇವರ ಸಂಯುಕ್ತಶ್ರಯದಲ್ಲಿ ಜೂನ್ 05 ಶುಕ್ರವಾರ ರಂದು ಜಿಲ್ಲಾ ನ್ಯಾಯಾಲಯದ ಆವರಣದಲ್ಲಿ ಗಿಡ ನೆಡುವ ಮೂಲಕ ವಿಶ್ವ ಪರಿಸರ ದಿನಾಚರಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು,

ಇಂದು ಅತಿಯಾದ ಪ್ಲಾಸ್ಟೀಕ ಬಳಕೆಯಿಂದ ಹಾಗೂ ಸಾಕಷ್ಟು ಪ್ರಮಾಣದಲ್ಲಿ ಗಿಡ-ಮರಗಳು ಇರದೇ ಇದ್ದುದರಿಂದ ಪರಿಸರ ವಿನಾಶದ ಅಂಚಿನಲ್ಲಿದೆ. ಪ್ರತಿಯೊಬ್ಬರು ಸಾಧ್ಯವಾದಷ್ಟು ಪ್ಲಾಸ್ಟೀಕ ಬಳಕೆ ನಿಲ್ಲಿಸಬೇಕು. ತಮ್ಮ ಮನೆಯ ಸುತ್ತ ಮುತ್ತ ಗಿಡ ಮರ ನೆಟ್ಟು ಪೋಷಿಸಬೇಕು ಎಂದು ಹೇಳಿದರು.

ಇದೆ ಸಂದರ್ಭದಲ್ಲಿ ಕೌಟುಂಬಿಕ ನ್ಯಾಯಾಲಯದ ಪ್ರಧಾನ ನ್ಯಾಯಾಧೀಶರಾದ ಗಂಗಾಧರ.ಸಿ.ಎಮ್, 1 ನೇ ಅಧಿಕ ಪ್ರಧಾನ ನ್ಯಾಯಾಧೀಶರು, ಕೌಟುಂಬಿಕ ನ್ಯಾಯಾಲಯದ ನ್ಯಾಯಾಧೀಶರಾದ ಆನಂದ ಟಿ ಚವ್ಹಾಣ, ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಗೀತಾ ಶಿಂದೆ, ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರಾದ ಗಿರಿಮಲ್ಲಪ್ಪ ಶಟ್ಟರ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಸಿ.ಎಸ್.ಶಿವನ ಗೌಡ್ರ, ಅಪರ ಹಿರಿಯ ದಿವಾಣಿ ನ್ಯಾಯಾಧೀಶರಾದ ಶ್ರೀಮತಿ. ಪದ್ಮಶ್ರೀ ಪಾಟೀಲ, ಪ್ರಧಾನ ದಿವಾಣಿ ನ್ಯಾಯಾ ಧೀಶರಾದ ಶ್ರೀಮತಿ.ದೀಪ್ತಿ ನಾಡಗೌಡ್ರ, ಗದಗ ಜಿಲ್ಲಾ ವಕೀಲರ ಸಂಘ ಉಪಾ ಧ್ಯಕ್ಷರಾದ ಎಮ್.ಎ.ಸಂಗನಾಳ, ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಗದಗ ವಿಭಾಗದ ಸಂತೋಷಕುಮಾರ್ ಕೆಂಚಪ್ಪನ ವರ ಹಾಗೂ ಚಂದ್ರಹಾಸ ವರ್ಣೇಕರ, ಉಪ ಅರಣ್ಯ ಸಂರಕ್ಷಣಾಧಿಕಾರಿಗಳು ಸಾಮಾಜಿಕ ಅರಣ್ಯ ವಿಭಾಗ ಗದಗ ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಹವಾಮಾನ ಬದಲಾವಣೆಯ ಕುರಿತು ಕ್ರಿಯಾ ಯೋಜನೆ ತರಬೇತಿ ಕಾರ್ಯಕ್ರಮ



**ಬೆಳಗಾವಿ ವಾರ್ತೆ ಗದಗ:** ಗದಗ ಜಿಲ್ಲೆಗೆ ಹವಾಮಾನ ಬದಲಾವಣೆಯ ಕ್ರಿಯಾ ಯೋಜನೆಯ ಕಾರ್ಯಕ್ಷಮತೆಗಳನ್ನು ಅಳವಡಿಸಿಕೊಳ್ಳುವುದರ ವರದಿಯನ್ನು ತಯಾರಿಸಬೇಕೆಂದು ಪರಿಸರ ನಿರ್ವಹಣೆ ಮತ್ತು ನೀತಿ ಸಂಶೋಧನಾ ಸಂಸ್ಥೆ , ಬೆಂಗಳೂರು (ಎಂಪ್ರಿ) ಹಿರಿಯ ಸಮಾಲೋಚಕರಾದ ಡಾ. ಸರಿತಾ ಅವರು ಅಧಿಕಾರಿಗಳಿಗೆ ಸಲಹೆ ನೀಡಿದರು.

ನಗರದ ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ಬುಧವಾರ ಕರ್ನಾಟಕ ರಾಜ್ಯ ಹವಾಮಾನ ಬದಲಾವಣೆ ಕುರಿತು ಕ್ರಿಯಾ ಯೋಜನೆ ತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಹವಾಮಾನ ಬದಲಾವಣೆಯ ಇಲಾಖಾ ಕ್ರಿಯಾ ಯೋಜನೆಯ ಕಾರ್ಯಕ್ಷಮತೆ ಸೂಚಕಗಳ ಅನುಷ್ಠಾನ ಕುರಿತು ಅಧಿಕಾರಿಗಳು ತಿಳಿದುಕೊಳ್ಳುವುದು ಅತ್ಯವಶ್ಯಕವಾಗಿದೆ. ಗದಗ ಜಿಲ್ಲೆಗೆ ಈ ಕಾರ್ಯಕ್ಷಮತೆಗಳನ್ನು ಅಳವಡಿಸಿಕೊಳ್ಳುವುದಕ್ಕಾಗಿ, ಸೂಕ್ತ ವರದಿಯನ್ನು ತಯಾರಿಸಲು ತಾವುಗಳು ಶ್ರಮಿಸಬೇಕು. ಇದರ ಜೊತೆಗೆ ಹೊಸ ತಂತ್ರಜ್ಞಾನಗಳ ಮೂಲಕ ತ್ಯಾಜ್ಯ ನಿರ್ವಹಣೆ ಮತ್ತು ತ್ಯಾಜ್ಯದಿಂದ ಇಂಧನ ಉತ್ಪಾದನೆಗೆ ಆದ್ಯತೆ ನೀಡಬೇಕು. ನದಿ, ಕೆರೆಗಳ ನೀರಿನ ಗುಣಮಟ್ಟದ ಕಾಪಾಡುವುದು, ಮಾಲಿನ್ಯ ತಡೆಗಟ್ಟಲು ಪರಿಸರವನ್ನು ಸುಸ್ಥಿರವಾಗಿಡಲು, ಮತ್ತು ಹಸಿರು ಇಂಧನಗಳ ಬಳಕೆಯನ್ನು ಹೆಚ್ಚಿಸಲು ಎಲ್ಲರೂ ಕೈಜೋಡಿಸಬೇಕೆಂದು ಅವರು ಹೇಳಿದರು.

ಹವಾಮಾನ ಬದಲಾವಣೆ ಕುರಿತು, ಕರ್ನಾಟಕ ಕ್ರಿಯಾ ಯೋಜನೆ ಬಗ್ಗೆ ಸುದೀರ್ಘ ವಿವರಣೆ ನೀಡಿದ ಅವರು ಕಾರ್ಯನೀತಿ, ಕಾರ್ಯತಂತ್ರಗಳು ಮತ್ತು ವಿವಿಧ ಸಂಘ-ಸಂಸ್ಥೆಗಳ ಕರ್ತವ್ಯವನ್ನು ಡಾ. ಸರಿತಾ ವಿವರಿಸಿದರು.

ವಿಷಯ ತಜ್ಞರಾದ ಶಶಿಕುಮಾರ್ ಅವರು. ಅಭ್ಯರ್ಥಿಗಳಿಗೆ ಜಲ ಸಂಪನ್ಮೂಲ ವಲಯದ ಹವಾಮಾನ ಕ್ರಿಯಾ ಯೋಜನೆ ಕುರಿತು ಮಾಹಿತಿ ನೀಡಿದರು.

ಗದಗ ಜಿಲ್ಲೆಯ ಎನ್.ಆರ್.ಡಿ.ಎಂ.ಎಸ್ ನ ಅಧಿಕಾರಿ ಮಂಜುನಾಥ್ ಅಭ್ಯರ್ಥಿಗಳಿಗೆ ಎನ್‌ಆರ್‌ಡಿಎಂಎಸ್ ಕೇಂದ್ರದ ಕುರಿತು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಂಘ ಸಂಸ್ಥೆಗಳು, ಶಿಕ್ಷಣ ಸಂಸ್ಥೆಗಳವರು ಹಾಜರಿದ್ದರು. ಶ್ರೀಮತಿ ಲತಾ ಎಂ.ಎಚ್. ಕಾರ್ಯಕ್ರಮ ನಿರೂಪಿಸಿದರು. ಶ್ರೀಮತಿ ಜಗದಾಂಬ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# 'ಪಿ ಎಮ್‌ಎಫ್‌ಎಮ್‌ಇ' ಯೋಜನೆಯ ಜಿಲ್ಲಾ ಸಮಿತಿ ಸಭೆ ಈಗಿನ ಬೇಡಿಕೆಗನುಸಾರವಾಗಿ ಹೊಸ ಹೊಸ ಘಟಕಗಳನ್ನು ಗುರುತಿಸಿ ಸ್ಥಾಪಿಸಿ

**ಬೆಳಗಾವಿ ವಾರ್ತೆ ಗದಗ:** ಇಂದಿನ ಬೇಡಿಕೆಗನು ಸಾರವಾಗಿ ಪಿಎಮ್‌ಎಫ್‌ಎಮ್‌ಇ ಯೋಜನೆಯಡಿ ವಿವಿಧ ಹೊಸ ಘಟಕ ಗಳನ್ನು ಗುರುತಿಸುವ ಹಾಗೂ ಸ್ಥಾಪಿಸುವ ಅವಶ್ಯಕತೆಯಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ ಕರೆ ನೀಡಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಪಿಎಂಎಫ್‌ಎಂಇ ಯೋಜನೆಯ ಜಿಲ್ಲಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಹಾಗೂ ಆತ್ಮ ನಿರ್ಭರ ಭಾರತ ಅಭಿಯಾನದ ಅಂಗವಾಗಿ ಪ್ರಧಾನಮಂತ್ರಿಗಳ ಕಿರು ಆಹಾರ ಸಂಸ್ಕರಣ ಉದ್ದಿಮೆಗಳ ನಿಯಮ ಬದ್ಧಗೊಳಿಸುವಿಕೆ (ಪಿ.ಎಮ್. ಎಫ್.ಎಮ್.ಇ) ಯೋಜನೆಯಡಿ ಬೇಕರಿ ಘಟಕದಡಿ ತಯಾರಿಸಲಾದ ಕೇಕನ್ನು ಕತ್ತರಿಸಿ ಸಭೆಯನ್ನು ಉದ್ಘಾಟಿಸಿ ನಂತರ ಮಾತನಾಡಿದರು.

ಜಿಲ್ಲೆಯಲ್ಲಿ ಪ್ರಮುಖವಾಗಿ ಬೆಳೆಯುತ್ತಿರುವ ಹೆಸರು, ಕಡಲೆ, ಮೆಕ್ಕೆಜೋಳದ ಸಂಸ್ಕರಣೆ ಹಾಗೂ ಮೌಲ್ಯವರ್ಧನೆಗೆ ಅಲ್ಲದೇ ವಿವಿಧ ತರಕಾರಿಗಳನ್ನು ಒಣಗಿಸಿ ಪುಡಿ ಮಾಡುವ ಘಟಕಗಳನ್ನು ಆರಂಭಿಸಬೇಕು. ಉದಾಹರಣೆಗೆ: ತಿನ್ನಲು ತಯಾರಿರುವ ತಿಂಡಿಗಳಾದ (Ready to Eat) ಉಪ್ಪಿಟ್ಟು, ಅವಲಕ್ಕಿ, ಸೂಪ್ ತಯಾರಿಸಲು ಬೇಕಾಗುವ ಎಲ್ಲಾ ತರಕಾರಿಗಳ ಒಣಗಿಸಿದ ಪುಡಿ, ಬೆಳ್ಳುಳ್ಳಿ, ಈರುಳ್ಳಿ ಪೇಸ್ಟಳಿಗೆ ಹೆಚ್ಚಿನ ಬೇಡಿಕೆ ಇದ್ದು, ಒಳ್ಳೆಯ ಪ್ಯಾಕಿಂಗ್ ಮತ್ತು ಬ್ರಾಂಡಿಂಗ್ ನೊಂದಿಗೆ ಒಳ್ಳೆಯ ಮಾರುಕಟ್ಟೆಯ ಬೆಲೆಯನ್ನು ಪಡೆದು ಆರ್ಥಿಕವಾಗಿ ಹೆಚ್ಚು ಲಾಭ ಪಡೆಯಲು ತಿಳಿಸಿದರು.

ಜಂಟಿ ಕೃಷಿ ನಿರ್ದೇಶಕರಾದ ಶ್ರೀಮತಿ ಚೇತನಾ ಪಾಟೀಲ ಅವರು ಮಾತನಾಡಿ ಪಿ.ಎಮ್.ಎಫ್.ಎಮ್.ಇ ಯೋಜನೆಯು 2020-21 ರಿಂದ ಜಾರಿಯಲ್ಲಿದ್ದು ಯೋಜನೆಯಡಿ ಜಿಲ್ಲೆಯಲ್ಲಿ ಈವರೆಗೆ 276 ಆಹಾರ ಸಂಸ್ಕರಣೆ ಘಟಕಗಳ ಸಾಧನೆಯನ್ನು ಮಂಡಿಸಿದರು. ಕೃಷಿ ಉತ್ಪನ್ನಗಳ ಮೌಲ್ಯವರ್ಧನೆಯಿಂದ ರೈತರು ಆದಾಯ ದ್ವಿಗುಣಗೊಳಿಸಲು ಶೇ. 50 ರ ಸಹಾಯಧನ (ಕೇಂದ್ರ ಸರ್ಕಾರದ ಶೇ. 35 ಹಾಗೂ ರಾಜ್ಯ ಸರ್ಕಾರದ ಶೇ.15 ) ಹಾಗೂ ಶೇ. 50 ರಷ್ಟು ಬ್ಯಾಂಕ ಮೂಲಕ ಸಾಲ ಪಡೆದು



ಹೊಸದಾಗಿ ಆಹಾರ ಸಂಸ್ಕರಣಾ ಘಟಕಗಳ ಸ್ಥಾಪನೆ ಅಥವಾ ಈಗಾಗಲೇ ಇರುವ ಆಹಾರ ಸಂಸ್ಸರಣಾ ಘಟಕಗಳ ಉನ್ನತೀಕರಣ ಮಾಡಲು ಸೆಪ್ಟೆಂಬರ್ 2026 ರವರೆಗೆ ಅವಕಾಶವಿದ್ದು ಯೋಜನೆಯ ಲಾಭ ಪಡೆಯಬೇಕೆಂದು ತಿಳಿಸಿದರು. ಲೀಡ್ ಬ್ಯಾಂಕ್ ಮ್ಯಾನೇಜರ್ ಸಂತೋಷ ಮ್ಯಾಲನ್‌ಹಳ್ಳಿ ಮಾತನಾಡುತ್ತಾ ವಿವಿಧ ಬ್ಯಾಂಕುಗಳಲ್ಲಿ ಬಾಕಿ ಇರುವ ಅರ್ಜಿಗಳನ್ನು ಬೇಗನೆ ವಿಲೇವಾರಿ ಮಾಡಲು ಸಂಬಂಧಿಸಿದ ಬ್ಯಾಂಕುಗಳಿಗೆ ಸೂಚಿಸಿಲಾಗುವುದು ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಯೋಜನೆ ಯಡಿ ಈವರೆಗೆ ಹೆಚ್ಚು ಘಟಕಗಳನ್ನು ಸ್ಥಾಪಿಸಿರುವ ಗೀರಿಶ್, ಬಸಪ್ಪ ಹಾಗೂ ಶ್ರೀನಿವಾಸ ಇವರನ್ನು ಸನ್ಮಾನಿಸಲಾಯಿತು. ಪಿ.ಎಮ್.ಎಫ್.ಎಮ್.ಇ ಘಟಕದಡಿ ತಯಾರಿಸಿದ ಉತ್ಪನ್ನಗಳಾದ ರೊಟ್ಟಿ, ಎಣ್ಣೆ, ಚಿಪ್ಸ್, ಫಾಪ್‌ಕಾರ್ನ ಹಾಗೂ ಇತ್ಯಾಧಿ ಪ್ರದರ್ಶಿಸಲಾಯಿತು.

ಸದರಿ ಸಭೆಯಲ್ಲಿ ಕೃಷಿ ಇಲಾಖೆಯ ಉಪ-ಕೃಷಿ ನಿರ್ದೇಶಕರು, ತಾಲೂಕು ಸಹಾಯಕ ಕೃಷಿ ನಿರ್ದೇಶಕರು, ತೋಟಗಾರಿಕೆ, ಪಶುಸಂಗೋಪನೆ, ರೇಷ್ಮೆ ಇಲಾಖೆಯ ಮುಖ್ಯಸ್ಥರು, ಜಿಲ್ಲಾ ಸಂಪನ್ಮೂಲ ವ್ಯಕ್ತಿಗಳು ಹಾಗೂ ಆತ್ಮ ಸಿಬ್ಬಂದಿಯವರು ಭಾಗವಹಿಸಿದರು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001